ಶನಿವಾರ 31.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 131
Digital Varthe Kannada Daily
Volume 01 - Issue 131
Saturday, 31.01.2026
Price: 5/- Rs
2 Pages Bangalore


PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಕೆ.ಪಿ. ಅಗ್ರಹಾರ ಠಾಣೆ ಇನ್ಸ್ಪೆಕ್ಟರ್ ಲೋಕಾಯುಕ್ತ ಬಲೆಗೆ



**ಬೆಂಗಳೂರು:**ಪ್ರಕರಣವೊಂದರಿಂದ ಆರೋಪಿಗಳನ್ನು ಕೈಬಿಡಲು ಐದು ಲಕ್ಷ ರೂಪಾಯಿ ಲಂಚ ಬೇಡಿಕೆಯಿಟ್ಟಿದ್ದ ಆರೋಪದಲ್ಲಿ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಕೆ.ಪಿ. ಅಗ್ರಹಾರ ಠಾಣೆಯ ಇನ್ಸ್ಪೆಕ್ಟರ್ ಗೋವಿಂದರಾಜುವನ್ನು ಬಲೆಗೆ ಬೀಳಿಸಿ ಬಂಧಿಸಿದ್ದಾರೆ. ಹಣ ಸ್ವೀಕರಿಸುವ ವೇಳೆ ನಡೆದ ಟ್ರ್ಯಾಪ್ ಕಾರ್ಯಾಚರಣೆ ಮೈಸೂರು ರಸ್ತೆ ಸಿಎಆರ್ ಮೈದಾನ ಸಮೀಪ ನಡೆದಿದೆ.

ಗೋವಿಂದರಾಜು ಚೀಟಿ ವ್ಯವಹಾರದಲ್ಲಿ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳ ಬಂಧನಕ್ಕಾಗಿ ದಾಳಿ ನಡೆಸಿದ್ದರು. ಈ ವೇಳೆ ಪ್ಲಾಟ್‌ನಲ್ಲಿದ್ದ ಆರೋಪಿಗಳು ಪೊಲೀಸರ ಕ್ರಮಕ್ಕೆ ವಿರೋಧ ವ್ಯಕ್ತಪಡಿಸಿದ್ದರು. ಮನೆಗೆ ಬಂದ ಪೊಲೀಸರ ಕಾರ್ಯಾಚರಣೆಯನ್ನು ಸಿಸಿಟಿವಿ ಹಾಗೂ ಮೊಬೈಲ್‌ನಲ್ಲಿ ಚಿತ್ರೀಕರಿಸಿದ್ದರು. "ನೋಟಿಸ್ ಕೊಡದೇ ಬಂದಿದ್ದೀರಾ, ನಾವು ನಮ್ಮ ವಕೀಲರೊಂದಿಗೆ ಮಾತನಾಡುತ್ತೇವೆ" ಎಂದು ಆರೋಪಿಗಳು ವಾದಿಸಿದ್ದಾಗಿ ತಿಳಿದುಬಂದಿದೆ. ನಂತರ ಪೊಲೀಸರು ಹೊಯ್ಸಳ ವಾಹನ ಕರೆಯಿಸಿ ಆರೋಪಿಗಳನ್ನು ಠಾಣೆಗೆ ಕರೆದುಕೊಂಡು ಹೋಗಿದ್ದರು.

ಥಾಣೆಗೆ ಕರೆದೊಯ್ದ ನಂತರ ಪ್ರಕರಣದಿಂದ ಬಿಡಿಸಲು ಹಣದ ಡೀಲ್ ನಡೆದಿರುವುದು ತನಿಖೆಯಲ್ಲಿ ಬಹಿರಂಗವಾಗಿದೆ. ಮೊದಲಿಗೆ ಒಂದು ಲಕ್ಷ ರೂಪಾಯಿ ಹಣ ತರಿಸಿಕೊಳ್ಳಲಾಗಿತ್ತು ಎನ್ನಲಾಗಿದೆ. ಬಳಿಕ ಉಳಿದ ನಾಲ್ಕು ಲಕ್ಷ ರೂಪಾಯಿಯನ್ನು ತರುವಂತೆ ಸೂಚನೆ ನೀಡಲಾಗಿತ್ತು. ಆರೋಪಿಗಳು ಲೋಕಾಯುಕ್ತ ಅಧಿಕಾರಿಗಳಿಗೆ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ಬಲೆಯೊಡ್ಡಲಾಗಿತ್ತು.

ನಾಲ್ಕು ಲಕ್ಷ ರೂಪಾಯಿ ಸ್ವೀಕರಿಸುವ ಕ್ಷಣದಲ್ಲೇ ಲೋಕಾಯುಕ್ತ ಅಧಿಕಾರಿಗಳು ಇನ್ಸ್ಪೆಕ್ಟರ್ ಗೋವಿಂದರಾಜುವನ್ನು ರಂಗೇ ಹಸ್ತವಾಗಿ ಹಿಡಿದಿದ್ದಾರೆ. ಬಂಧನದ ನಂತರ ಅವರನ್ನು ವಶಕ್ಕೆ ಪಡೆದು ತೀವ್ರ ವಿಚಾರಣೆ ನಡೆಸಲಾಗುತ್ತಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರ ಬಂಧನ ಕಾರ್ಯಾಚರಣೆ, ಮಾತಿನ ಚಕಮಕಿಯ ಸಿಸಿಟಿವಿ ದೃಶ್ಯಗಳು ಹಾಗೂ ಮೊಬೈಲ್ ವೀಡಿಯೋಗಳು ಲಭ್ಯವಾಗಿವೆ.

ವೈರಲ್ ಆಗಿರುವ ವೀಡಿಯೋದಲ್ಲಿ ವ್ಯಕ್ತಿಯೊಬ್ಬರು "ನಾವು ನಿಮ್ಮ ಕರ್ತವ್ಯಕ್ಕೆ ಅಡ್ಡಿಪಡಿಸಿಲ್ಲ... ನೀವು ನೋಟಿಸ್ ತೋರಿಸಿಲ್ಲ... ನಮಗೆ ವಕೀಲ ಬೇಕು..." ಎಂದು ಹೇಳುತ್ತಿರುವುದು ಕೇಳಿಸುತ್ತದೆ. ಇದಕ್ಕೆ ಪ್ರತಿಕ್ರಿಯಿಸಿದ ಇನ್ಸ್ಪೆಕ್ಟರ್ "ನಮ್ಮ ಕರ್ತವ್ಯಕ್ಕೆ ಅಡ್ಡಿಪಡಿಸ್ತಾ ಇದ್ದೀರಾ?" ಎಂದು ಪ್ರಶ್ನಿಸುವ ದೃಶ್ಯಗಳು ದಾಖಲಾಗಿವೆ. ಪ್ರಕರಣದ ಎಲ್ಲಾ ಆಯಾಮಗಳ ಕುರಿತು ಲೋಕಾಯುಕ್ತ ಅಧಿಕಾರಿಗಳು ಮುಂದಿನ ತನಿಖೆ ಮುಂದುವರೆಸಿದ್ದಾರೆ.

## ಗ್ರಾಮಸ್ವರಾಜ್ಯ ಗಾಂಧೀಜಿ ಕನಸು – ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** "ಹಳ್ಳಿಯಿಂದ ದಿಲ್ಲಿಯೇ ಹೊರತು, ದಿಲ್ಲಿಯಿಂದ ಹಳ್ಳಿಯಲ್ಲ" ಎಂಬ ಮಹಾತ್ಮ ಗಾಂಧೀಜಿಯವರ ತತ್ವವು ಗ್ರಾಮಸ್ವರಾಜ್ಯದ ಬಲವಾದ ಆಧಾರವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಹುತಾತ್ಮ ದಿನಾಚರಣೆಯ ಅಂಗವಾಗಿ ಮಹಾತ್ಮ ಗಾಂಧೀಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಅವರು ಮಾತನಾಡಿದರು.

ಗಾಂಧೀಜಿಯವರು ದೇಶಕ್ಕೆ ನೀಡಿದ ಅಮೂಲ್ಯ ಕೊಡುಗೆಯನ್ನು ಸ್ಮರಿಸುವ ದಿನ ಇದಾಗಿದೆ. ಭಾರತವು ಮೂಲತಃ ಹಳ್ಳಿಗಳ ದೇಶ. ಸ್ವಾತಂತ್ರ್ಯ ಪೂರ್ವದಲ್ಲಿ ದೇಶದ ಸುಮಾರು 80 ಶೇಕಡಾ ಜನರು ಗ್ರಾಮಗಳಲ್ಲಿ ವಾಸಿಸುತ್ತಿದ್ದರು. ಗ್ರಾಮಗಳು ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಹಾಗೂ ರಾಜಕೀಯವಾಗಿ ಸ್ವಾವಲಂಬಿ ಯಾಗಬೇಕು ಎಂಬುದೇ ಗಾಂಧೀಜಿಯವರ ಆಶಯವಾಗಿತ್ತು. ಗ್ರಾಮಗಳ ಪ್ರಗತಿಯಲ್ಲಿಯೇ ದೇಶದ ಸಮಗ್ರ ಅಭಿವೃದ್ಧಿ ಅಡಗಿದೆ ಎಂದು ಅವರು ಪ್ರತಿಪಾದಿಸಿದ್ದರು ಎಂದು ಸಿಎಂ ಸ್ಮರಿಸಿದರು.

ಮಹಾತ್ಮಾ ಗಾಂಧೀಜಿ ಅವರ ಗ್ರಾಮಸ್ವರಾಜ್ಯದ ಕನಸನ್ನು ಕಾರ್ಯರೂಪಕ್ಕೆ ತರುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮುಂದುವರಿಯಲಿದೆ ಎಂದು ಅವರು ಹೇಳಿದರು. ರಾಜ್ಯದಲ್ಲಿ ಸುಮಾರು ಆರು ಸಾವಿರ ಪಂಚಾಯಿತಿಗಳಿದ್ದು, ಅವುಗಳಿಗೆ ಮಹಾತ್ಮ ಗಾಂಧೀಜಿಯವರ ಹೆಸರು ಇಡುವ ಕುರಿತು ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದು ಘೋಷಿಸಿದರು. ಇದು ಕೇವಲ ನಾಮಕರಣವಲ್ಲ, ಗ್ರಾಮಾಭಿವೃದ್ಧಿಗೆ ಹೊಸ ದಿಕ್ಕು ನೀಡುವ ಪ್ರಯತ್ನವಾಗಲಿದೆ ಎಂದರು.

ಗಾಂಧೀಜಿಯವರ ತ್ಯಾಗ ಮತ್ತು ಆದರ್ಶಗಳನ್ನು ಇಡೀ ದೇಶ ಸದಾ ಸ್ಮರಿಸುತ್ತಿದೆ. ಅಹಿಂಸೆಯ ಮಾರ್ಗದಲ್ಲಿ ನಡೆದ ಮಹಾನ್ ಚೇತನ ಗುಂಡೇಟಿಗೆ ಬಲಿಯಾದರೂ, ಅವರ ಚಿಂತನೆಗಳು ಇಂದಿಗೂ ಜೀವಂತವಾಗಿವೆ. ಒಬ್ಬ ಅಭಿಮಾನಿ ಗಾಂಧೀಜಿಯವರು 100 ವರ್ಷ ಬದುಕಬೇಕು ಎಂದು ಹಾರೈಸಿದಾಗ, "ನಾನು 125 ವರ್ಷ ದೇಶಕ್ಕಾಗಿ ಬದುಕಲು ಬಯಸುತ್ತೇನೆ" ಎಂದು ಹೇಳಿದ್ದನ್ನು ಸಿಎಂ ಉಲ್ಲೇಖಿಸಿದರು. ಅವರ ಬದುಕು, ತತ್ವ, ಸೇವಾಭಾವನೆ ದೇಶದ ಜನತೆಗೆ ಶಾಶ್ವತ ಪ್ರೇರಣೆಯಾಗಿದೆ ಎಂದು ಹೇಳಿದರು.

ಗುತ್ತಿಗೆದಾರರ ಬಾಕಿ ಬಿಲ್ಲುಗಳ ಕುರಿತು ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಸಿಎಂ, ಹಿಂದಿನ ಬಿಜೆಪಿ ಸರ್ಕಾರವೇ ಅನೇಕ ಬಾಕಿ ಪಾವತಿಗಳನ್ನು ಬಿಟ್ಟುಹೋಗಿದೆ ಎಂದು ಆರೋಪಿಸಿದರು. ಆರ್ಥಿಕ ಬಾಧ್ಯತೆಗಳನ್ನು ಹಂತ ಹಂತವಾಗಿ ನಿರ್ವಹಿಸುವ ಪ್ರಯತ್ನ ಸರ್ಕಾರ ಮಾಡುತ್ತಿದೆ ಎಂದರು.

ಹುತಾತ್ಮ ದಿನದ ಅಂಗವಾಗಿ ನಡೆದ ಈ ಕಾರ್ಯಕ್ರಮದಲ್ಲಿ ಗಣ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಗಾಂಧೀಜಿಯವರಿಗೆ ಗೌರವ ನಮನ ಸಲ್ಲಿಸಿದರು. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ನಿಜವಾದ ಗೌರವ ಎಂದು ಕಾರ್ಯಕ್ರಮದಲ್ಲಿ ಒತ್ತಿ ಹೇಳಲಾಯಿತು.

## ಸರ್ಕಾರಿ ಆಸ್ಪತ್ರೆಯಿಂದ ನವಜಾತ ಶಿಶು ನಾಪತ್ತೆ



**ಕೃಷ್ಣನಗರ:** ಸರ್ಕಾರಿ ಆಸ್ಪತ್ರೆ)ಯಿಂದ ನವಜಾತ ಶಿಶು ಕಾಣೆಯಾಗಿರುವ ಘಟನೆ ಪಶ್ಚಿಮ ಬಂಗಾಳದ ನಾಡಿಯಾದಲ್ಲಿ ನಡೆದಿದೆ. ರೋಗಿಯ ಕುಟುಂಬವು ಆಸ್ಪತ್ರೆಯ ಬಾಗಿಲು ಮುಚ್ಚಿ ಪ್ರತಿಭಟಿಸಿತು. ಹೆರಿಗೆ ನೋವಿನಿಂದ ಬಳಲುತ್ತಿದ್ದ ಮಹಿಳೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಹೆರಿಗೆಯೂ ನಡೆದಿತ್ತು. ಆದರೆ ಮಗು ಮಾತ್ರ ಎಲ್ಲಿಗೆ ಹೋಗಿತು ಎಂಬುದೇ ಯಕ್ಷಪ್ರಶ್ನೆಯಾಗಿ ಉಳಿದಿದೆ.

ಆದರೆ ಮಗುವನ್ನು ಮಾತ್ರ ಆಸ್ಪತ್ರೆ ವೈದ್ಯರು ಕೊಡಲೇ ಇಲ್ಲ, ಅದರ ಬದಲು ಆಕೆಯ ಹೊಟ್ಟೆಯಲ್ಲಿ ಮಗುವೇ ಇರಲಿಲ್ಲ ಎಂದು ಸುಳ್ಳು ಹೇಳಿದ್ದಾರೆ. ಮತ್ತೊಂದೆಡೆ, ಕೊನೆಯ ಅಲ್ಟ್ರಾ-ಸೋನೋಗ್ರಫಿಯಲ್ಲಿ 2 ಕೆಜಿ 400 ಗ್ರಾಂ ತೂಕದ ಮಗು ಇದೆ ಎಂದು ವರದಿಯಾಗಿದೆ ಎಂದು ಆಶಾ ಕಾರ್ಯಕರ್ತೆ ಹೇಳಿದ್ದಾರೆ. ಆದರೆ ಮಗು ಎಲ್ಲಿಯೂ ಸಿಗದಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

ಈ ಘಟನೆಯಿಂದ ಆಸ್ಪತ್ರೆಯಲ್ಲಿ ಹೆಚ್ಚಿನ ಉದ್ವಿಗ್ನತೆ ಉಂಟಾಗಿದೆ. ಈ ವಿಷಯದ ಬಗ್ಗೆ ತನಿಖೆ ನಡೆಸಲು ತನಿಖಾ ಸಮಿತಿಯನ್ನು ರಚಿಸಲಾಗುವುದು ಎಂದು ಜಿಲ್ಲಾ ಆರೋಗ್ಯ ಮುಖ್ಯ ಆರೋಗ್ಯ ಅಧಿಕಾರಿ ತಿಳಿಸಿದ್ದಾರೆ. ಈ ಘಟನೆಯ ಬಗ್ಗೆ ಕುಟುಂಬ ಸದಸ್ಯರು ಪೊಲೀಸ್ ಠಾಣೆಗೆ ಲಿಖಿತ ದೂರು ದಾಖಲಿಸಿದ್ದಾರೆ.ನಾಡಿಯಾದ ಕೃಷ್ಣನಗರ ಸದರ್ ಆಸ್ಪತ್ರೆಯಲ್ಲಿ ಈ ಘಟನೆ ನಡೆದಿದೆ. ನಬದ್ವೀಪ್‌ನ ಇಪ್ಪತ್ತರ ಹರೆಯದ ಮಂಪಿ ಖಾತುನ್ ಎಂಬ ಗರ್ಭಿಣಿ ಮಹಿಳೆಯನ್ನು ಹೆರಿಗೆಗಾಗಿ ಕೃಷ್ಣನಗರ ಸದರ್ ಆಸ್ಪತ್ರೆಗೆ ಕರೆತರಲಾಗಿತ್ತು ಎಂದು ಆರೋಪಿಸಲಾಗಿದೆ.

ಅಲ್ಲಿ ಹಲವಾರು ಗಂಟೆಗಳ ಕಾಲ ದಾಖಲಾಗಿದ್ದ ನಂತರ, ಅವರನ್ನು ಹೆರಿಗೆ ಟೇಬಲ್‌ಗೆ ಕರೆದೊಯ್ಯಲಾಯಿತು. ನಂತರ ಅವರಿಗೆ ಹೆರಿಗೆ ಮಾಡಲಾಯಿತು ಎಂದು ಕುಟುಂಬದವರು ಹೇಳಿಕೊಂಡಿದ್ದಾರೆ. ರೋಗಿಯ ಕುಟುಂಬವು ಆಸ್ಪತ್ರೆಗೆ ಹಿಂತಿರುಗಿದಾಗ ಅವರಿಗೆ ಒಳಗೆ ಹೋಗಲು ಅವಕಾಶ ನೀಡಲಿಲ್ಲ ಎಂದು ಹೇಳುತ್ತದೆ. ಗರ್ಭಧಾರಣೆಯಿಂದ ಆಕೆಯ ದೈಹಿಕ ಪರೀಕ್ಷೆಯ ಎಲ್ಲಾ ದಾಖಲೆಗಳು ಅವರ ಬಳಿ ಇವೆ.

ಆಶಾ ಕಾರ್ಯಕರ್ತೆ ರೋಜಿನಾ ಬೀಬಿ ಶೇಖ್ಮ ಮಾತನಾಡಿ, ಮಹಿಳೆಗೆ ಮೋಸ ಮಾಡಲಾಗಿದೆ. ಅವಳು ಗರ್ಭಿಣಿಯಾಗಿದ್ದಾಗಿನಿಂದ ನಾನು ಅವಳನ್ನು ನೋಡುತ್ತಿದ್ದೇನೆ. ಜನವರಿ 21 ರಂದು ಅವಳಿಗೆ USG ಮಾಡಲಾಗಿತ್ತು ಮತ್ತು ಮಗು ಇತ್ತು ಎಂದರು. ಅವರು ನನ್ನನ್ನು ಮಲಗಿಸಿದ್ದರು, ನಂತರ ಹೆರಿಗೆ ಮಾಡಲಾಗಿದೆ ಎಂದು ನಾನು ಭಾವಿಸಿದ್ದೆ ಆದರೆ, ನನ್ನ ಹೊಟ್ಟೆಯಲ್ಲಿ ಮಗುವೇ ಇರಲಿಲ್ಲ ಎಂದು ವೈದ್ಯರು ಹೇಳಿದ್ದಾರೆಂದು ಮಹಿಳೆ ಬೇಸರ ವ್ಯಕ್ತಪಡಿಸಿದ್ದಾರೆ.

## ಮಂಡ್ಯದ ಗ್ರಾಮ ಪಂಚಾಯ್ತಿ ಇ-ಖಾತೆಗಳಲ್ಲಿ ಅಕ್ರಮ

**ಮಂಡ್ಯ:** ಸಕ್ಕರೆ ನಾಡು ಮಂಡ್ಯ ಜಿಲ್ಲೆಯಲ್ಲಿ ಭೂ ಅಕ್ರಮಗಳು ವ್ಯಾಪಕವಾಗಿ ಸದ್ದು ಮಾಡುತ್ತಿವೆ. ನಾಗಮಂಗಲದಲ್ಲಿ ಬಗರ್ ಹುಕುಂನಲ್ಲಿ ಕೋಟ್ಯಂತ್ಯರ ರೂಪಾಯಿ ಅಕ್ರಮವಾದ ಬೆನ್ನಲ್ಲೇ ಇದೀಗ ಮಂಡ್ಯದ ಗ್ರಾಮ ಪಂಚಾಯಿತಿಯಲ್ಲಿ ಮತ್ತೊಂದು ಅಕ್ರಮ ಬೆಳಕಿಗೆ ಬಂದಿದೆ. ಸರ್ಕಾರ ಮನೆ ಕಟ್ಟುವವರಿಗೆ ಎಲ್ಲಾ ಸವಲತ್ತುಗಳನ್ನ ನೀಡಬೇಕೆಂದು ಗ್ರಾಮಾಂತರ ಪ್ರದೇಶದಲ್ಲಿ ಗ್ರಾಮ ಪಂಚಾಯಿತಿಗಳ ಮೂಲಕ ಇ-ಖಾತೆಯನ್ನ ನೀಡುತ್ತಿದೆ. ಈ ಇ-ಖಾತೆಯನ್ನ ಮಂಡ್ಯದ ಇಂಡುವಾಳು ಗ್ರಾಮ ಪಂಚಾಯಿತಿಯಲ್ಲಿ ಅಧಿಕಾರಿಗಳು ಸಂಪೂರ್ಣವಾಗಿ ದುರುಪಯೋಗ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ.

ಹಣದಾಸೆಗೆ ರಿಯಲ್ ಎಸ್ಟೇಟ್ ಉದ್ಯಮಿಗಳೊಂದಿಗೆ ಅಧಿಕಾರಿಗಳು ಶಾಮೀಲಾಗಿ 1881 ಇ-ಖಾತೆಗಳನ್ನ ಅಕ್ರಮವಾಗಿ ಮಾಡಿದ್ದಾರೆ ಉಪ ಲೋಕಾಯುಕ್ತ ಬಿ.ವೀರಪ್ಪ ಅವರ ಭೇಟಿ ವೇಳೆ ಬೆಳಕಿಗೆ ಬಂದಿದೆ. ಕಳೆದ ಮೇ ತಿಂಗಳಿನಲ್ಲಿ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು ಮಂಡ್ಯ ಜಿಲ್ಲೆಯ ಹಲವು ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿದ್ದರು. ಈ ವೇಳೆ ಇಂಡುವಾಳು ಪಂಚಾಯಿತಿಯಲ್ಲಿ ಕಡತಗಳು ಮಿಸ್ ಆಗಿದ್ದವು. ಹೀಗಾಗಿ ಉಪ ಲೋಕಾಯುಕ್ತ ಈ ಬಗ್ಗೆ ತನಿಖೆ ನಡೆಸಲು ಸೂಚನೆ ನೀಡಿದ್ದರು.

ಈ ತನಿಖೆ ನಡೆಯುವ ವೇಳೆ ಇಲ್ಲಿ ಇ-ಖಾತೆಯಲ್ಲಿ ಅಕ್ರಮವೆಸಗಿದೆ ಎಂದು ತಿಳಿದುಬಂದಿದೆ. ಇದನ್ನೂ ಓದಿ: ಹಾಸನ ಇಲ್ಲಿ ಗ್ರಾಮ ಪಂಚಾಯತಿ ಅಧಿಕಾರಿಗಳು ರಿಯಲ್ ಎಸ್ಟೇಟ್ ಉದ್ಯಮಿಗಳ ಜೊತೆ ಸೇರಿ ಅಕ್ರಮ ಬಡಾವಣೆಗಳನ್ನ ಮಾಡಲು ಒಂದು ಖಾತೆಗೆ ಒಂದು ಲಕ್ಷ ಹಣ ಪಡೆದು ಅಕ್ರಮವಾಗಿ ಇ-ಖಾತೆ ಮಾಡಿಕೊಟ್ಟಿದ್ದಾರೆ ಎನ್ನಲಾಗುತ್ತಿದೆ. 2021 ರಿಂದ 2025 ರಲ್ಲಿ ಇಂಡುವಾಳು ಪಂಚಾಯತಿಯಲ್ಲಿ 1929 ಖಾತೆಗಳನ್ನ ಮಾಡಲಾಗಿದ್ದು, ಇದರಲ್ಲಿ ಕೇವಲ 48 ಖಾತೆಗಳು ಅಷ್ಟೇ ನಿಯಮ ಬದ್ಧಗಳಾಗಿವೆ. ಉಳಿದ ಎಲ್ಲಾ ಇ-ಖಾತೆಗಳು ಅಕ್ರಮ ಎಂದು ತಿಳಿದುಬಂದಿದೆ.

ತಹಶೀಲ್ದಾರ್ ನೇತೃತ್ವದಲ್ಲಿ ತನಿಖೆ ನಡೆಸಿ ವರದಿ ಸಹ ಕೊಟ್ಟಿದೆ. ಇದೀಗ ಎರಡನೇ ಹಂತದಲ್ಲಿ ಸದ್ಯ ಈ ಸಂಬಂಧ ಇಓ ಲೋಕೇಶ್ ಮೂರ್ತಿ ನೇತೃತ್ವದಲ್ಲಿ ತನಿಖೆ ನಡೆಸುತ್ತಿದೆ. ಒಟ್ಟಾರೆ ಜನರಿಗೆ ಅನುಕೂಲವಾಗಲು ಕೆಲಸ ಮಾಡಿಕೊಡಬೇಕಾದ ಅಧಿಕಾರಿಗಳು ಹಣದಾಸೆಗೆ ಇಷ್ಟೊಂದು ಪ್ರಮಾಣದಲ್ಲಿ ಅಕ್ರಮವೆಸಗಿರೋದು ಸೋಜಿಗದ ವಿಚಾರ. ತನಿಖೆ ಬಳಿಕ ಇವರುಗಳಿಗೆ ಯಾವ ಶಿಕ್ಷೆ ಆಗುತ್ತೆ ಅನ್ನೋದನ್ನ ಕಾದು ನೋಡಬೇಕಿದೆ.

## ಲಕ್ಕುಂಡಿ ಉತ್ಖನನ ಸ್ಥಳದಲ್ಲಿ ಪತ್ತೆಯಾಯ್ತು ಜೀವಂತ ಸರ್ಪ



**ಗದಗ:** ಜಿಲ್ಲೆಯ ಐತಿಹಾಸಿಕ ಲಕ್ಕುಂಡಿ ಗ್ರಾಮವು ತನ್ನ ಅಪೂರ್ವ ಶಿಲ್ಪಕಲೆ, ಅದ್ಭುತ ವಾಸ್ತುಶಿಲ್ಪ ಮತ್ತು ಶ್ರೀಮಂತ ಸಾಂಸ್ಕೃತಿಕ ಪರಂಪರೆಯಿಂದಾಗಿ "ದೇವಾಲಯಗಳ ಸ್ವರ್ಗ" ಎಂದೇ ಪ್ರಸಿದ್ಧಿಯಾಗಿದೆ. ಇದೀಗ ಈ ಗ್ರಾಮವು ಮತ್ತೊಂದು ಅಪರೂಪದ ಘಟನೆಯಿಂದಾಗಿ ಇಡೀ ರಾಜ್ಯದ ಗಮನ ಸೆಳೆಯುತ್ತಿದೆ. ಇದೀಗ ಉತ್ಖನನ ಕಾರ್ಯದ ವೇಳೆ, ನಿಜ ನಾಗರಹಾವು ಪತ್ತೆಯಾಗಿದೆ.

ಲಕ್ಕುಂಡಿಯ ವಾರ್ಡ್ ನಂಬರ್ 4ರಲ್ಲಿ ವಾಸಿಸುವ ಗಂಗವ್ವ ಬಸವರಾಜ ರಿತ್ತಿ ಅವರ ಮನೆಯ ಅಡಿಪಾಯ ಅಗೆಯುವ ಸಂದರ್ಭದಲ್ಲಿ ಅಚ್ಚರಿಯ ಘಟನೆಯೊಂದು ನಡೆದಿತ್ತು. ಮನೆಯ 8ನೇ ತರಗತಿಯ ವಿದ್ಯಾರ್ಥಿ ಪ್ರಜ್ವಲ್ ರಿತ್ತಿ ಮೊದಲು ತಾಮ್ರದ ಪಾತ್ರೆಯನ್ನು ಗಮನಿಸಿದನು. ಅದನ್ನು ತೆರೆದು ನೋಡಿದಾಗ ಅದರೊಳಗೆ ಚಿನ್ನದ ಹಾರಗಳು, ಬಳೆಗಳು, ಉಂಗುರಗಳು ಹಾಗೂ ಕಿವಿಯೋಲೆಗಳು ಪತ್ತೆಯಾಗಿದ್ದವು. ಈ ಬೆಳವಣಿಗೆಯ ಬೆನ್ನಲ್ಲೇ, ಕರ್ನಾಟಕ ಸರ್ಕಾರ ಹಾಗೂ ಪುರಾತತ್ವ ಇಲಾಖೆ ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತ್ತು. ಬಳಿಕ ಜನವರಿ 16 ರಿಂದ ಲಕ್ಕುಂಡಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಅಧಿಕೃತ ಉತ್ಖನನ ಕಾರ್ಯ ಆರಂಭಿಸಲಾಯಿತು. ಪುರಾತತ್ವ ತಜ್ಞರ ಮೇಲ್ವಿಚಾರಣೆಯಲ್ಲಿ, ವೈಜ್ಞಾನಿಕ ವಿಧಾನಗಳನ್ನು ಬಳಸಿ ನಿತ್ಯವೂ ಶೋಧ ಕಾರ್ಯ ಮುಂದುವರಿದಿದೆ. ಇದೀಗ 13ನೇ ದಿನದ ಉತ್ಖನನ ಕಾರ್ಯ ನಡೆಯುತ್ತಿದ್ದು, ಪ್ರತಿದಿನವೂ ಹೊಸ ಹೊಸ ಅಚ್ಚರಿಗಳು ಹೊರ ಬರುತ್ತಿವೆ.

ಇದಕ್ಕೂ ಮುನ್ನ ಮೂರು ಹೆಡೆಯಿರುವ ನಾಗರಹಾವಿನ ಶಿಲೆ ಪತ್ತೆಯಾಗಿದ್ದು, ಗ್ರಾಮಸ್ಥರಲ್ಲಿ ಅಪಾರ ಕುತೂಹಲ ಹುಟ್ಟಿಸಿತ್ತು. ಇದೀಗ ಅದರ ಬೆನ್ನಲ್ಲೇ, ನಿಜ ನಾಗರಹಾವು ಉತ್ಖನನ ಸ್ಥಳದಲ್ಲಿ ಸಂಚರಿಸುತ್ತಿರುವುದು ಕಂಡುಬಂದಿದೆ. ಹಾವು ಅಚಾನಕ್ ಕಾಣಿಸಿಕೊಂಡಾಗ ಕೆಲಸಗಾರರು ಮತ್ತು ಸ್ಥಳದಲ್ಲಿದ್ದ ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ. ತಕ್ಷಣವೇ ಅರಣ್ಯ ಇಲಾಖೆ ಸಿಬ್ಬಂದಿಯನ್ನು ಕರೆಸಿ, ಹಾವನ್ನು ಸುರಕ್ಷಿತವಾಗಿ ನಿಯಂತ್ರಿಸುವ ಕಾರ್ಯ ಕೈಗೊಳ್ಳಲಾಯಿತು. ಈ ಘಟನೆ ಬಳಿಕ, "ನಿಧಿಯನ್ನು ಕಾಪಾಡಲು ಸ್ವತಃ ನಾಗಪ್ಪನೇ ಬಂದಿದ್ದಾನೆ" ಎಂಬ ನಂಬಿಕೆ ಗ್ರಾಮದಲ್ಲಿ ಹರಡಿದೆ. ಗದಗ ಜಿಲ್ಲೆಯ ಐತಿಹಾಸಿಕ ಲಕ್ಕುಂಡಿ ಪಟ್ಟಣದಲ್ಲಿ ಜಿಲ್ಲಾಡಳಿತದ ನೇತೃತ್ವದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ದಿನದಿಂದ ದಿನಕ್ಕೆ ಹೆಚ್ಚಿನ ಕುತೂಹಲ ಮತ್ತು ಸಂಚಲನ ಮೂಡಿಸುತ್ತಿದೆ. ಪ್ರಾಚೀನ ಕಾಲದ ವೈಭವಕ್ಕೆ ಸಾಕ್ಷಿಯಾಗಿರುವ ಈ ಪ್ರದೇಶದಲ್ಲಿ ಪ್ರತಿದಿನ ಅಮೂಲ್ಯ ಪುರಾತನ ವಸ್ತುಗಳು ಪತ್ತೆಯಾಗುತ್ತಿದೆ.

ಲಕ್ಕುಂಡಿಯ ಕೋಟೆ ವೀರಭದ್ರೇಶ್ವರ ಸ್ವಾಮಿ ದೇವಸ್ಥಾನದ ಸಮೀಪ ಕಳೆದ ಎಂಟು ದಿನಗಳಿಂದ ಉತ್ಖನನ ಕಾರ್ಯ ಕೈಗೊಳ್ಳಲಾಗಿದೆ. ಈಗಾಗಲೇ ನಾಲ್ಕು ಬ್ಲಾಕ್‌ಗಳಂತೆ ಮಣ್ಣನ್ನು ತೆಗೆಯಲಾಗಿದ್ದು, ಈ ವೇಳೆ ಶಿವಲಿಂಗಗಳು, ನಾಗರಕಲ್ಲುಗಳು, ಶಿವಲಿಂಗದ ಪೀಠಗಳು, ವಿವಿಧ ವಿಗ್ರಹಗಳು, ದೇವಾಲಯದ ರಚನೆಯ ಕುರುಹುಗಳು ಸೇರಿದಂತೆ ಹಲವಾರು ಪುರಾತನ ವಸ್ತುಗಳು ಪತ್ತೆಯಾಗಿವೆ. ಅಲ್ಲದೆ ನವಶಿಲಾಯುಗದ ಕಾಲಕ್ಕೆ ಸೇರಿದ್ದೆಂದು ಹೇಳಲಾಗಿರುವ ಕೈ ಕೊಡಲಿ, ಕೆಂಪು ಮಣಿ, ಟೆರ್ರಾಕೋಟಾದ ಬಿಲ್ಲೆಗಳು ಮತ್ತು ಪ್ರಾಚ್ಯ ಅವಶೇಷಗಳು ದೊರೆತಿವೆ.

ಉತ್ಖನದ 8ನೇ ದಿನವಾದ ಇಂದು, ಅತ್ಯಂತ ಕುತೂಹಲಕಾರಿ ಮತ್ತು ಅಮೂಲ್ಯವೆಂದು ಪರಿಗಣಿಸಲ್ಪಡುವ ಲೋಹದ ಗುಂಡು ಪತ್ತೆಯಾಗಿದ್ದು, ಸ್ಥಳೀಯರು ಮತ್ತು ಅಧಿಕಾರಿಗಳ ಗಮನ ಸೆಳೆದಿದೆ. ಸುಮಾರು ಅರ್ಧ ಕಿಲೋಗ್ರಾಂ ತೂಕವಿರುವ ಈ ಲೋಹದ ಗುಂಡು ಯಾವ ಕಾಲಘಟ್ಟಕ್ಕೆ ಸೇರಿದೆ? ಎಂಬ ಪ್ರಶ್ನೆಗಳು ಈಗ ವ್ಯಾಪಕ ಚರ್ಚೆಗೆ ಕಾರಣವಾಗಿವೆ.

ಈ ಲೋಹದ ಗುಂಡು ಯುದ್ಧೋಪಕರಣವಾಗಿರಬಹುದೇ ಅಥವಾ ಯಾವುದಾದರೂ ವಿಶೇಷ ವಿಧಿವಿಧಾನಗಳಲ್ಲಿ ಬಳಸುತ್ತಿದ್ದ ವಸ್ತುವಾಗಿರಬಹುದೇ ಎಂಬ ಕುರಿತು ಪುರಾತತ್ವ ತಜ್ಞರು ಅಧ್ಯಯನ ನಡೆಸುತ್ತಿದ್ದಾರೆ. ಜಿಲ್ಲಾಡಳಿತ ವಸ್ತುವನ್ನು ವಶಕ್ಕೆ ಪಡೆದು ಸಂರಕ್ಷಣೆಗಾಗಿ ಕ್ರಮ ಕೈಗೊಂಡಿದ್ದು, ವಿಜ್ಞಾನಾಧಾರಿತ ಪರೀಕ್ಷೆಗಳಿಗೆ ಕಳುಹಿಸುವ ನಿರ್ಧಾರ ತೆಗೆದುಕೊಂಡಿದೆ. ಪರೀಕ್ಷೆಯ ನಂತರ ಈ ವಸ್ತುವಿನ ಕಾಲಮಾನ, ಇತಿಹಾಸ ಮತ್ತು ಉಪಯೋಗದ ಬಗ್ಗೆ ಸ್ಪಷ್ಟ ಚಿತ್ರಣ ಲಭ್ಯವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಲಕ್ಕುಂಡಿಯ ವೀರಭದ್ರೇಶ್ವರ ದೇವಾಲಯದ ಸುತ್ತಮುತ್ತ ಇನ್ನೂ ಕೆಲವೇ ಅಡಿ ಮಣ್ಣನ್ನು ತೆಗೆಯಬೇಕಿದ್ದು, ಅಲ್ಲಿ ಇನ್ನಷ್ಟು ಪುರಾತನ ಮತ್ತು ರಾಜ-ಮಹಾರಾಜರ ಕಾಲದ ಅಮೂಲ್ಯ ವಸ್ತುಗಳು ದೊರೆಯುವ ನಿರೀಕ್ಷೆ ಹೆಚ್ಚಿದೆ..

ಇನ್ನೊಂದೆಡೆ, ಲಕ್ಕುಂಡಿಯಲ್ಲಿ ನಡೆಯುತ್ತಿರುವ ಈ ಉತ್ಖನನ ಕಾರ್ಯ ಸ್ಥಳೀಯರು ಮಾತ್ರವಲ್ಲದೆ ವಿದೇಶಿ ಪ್ರವಾಸಿಗರ ಗಮನವನ್ನೂ ಸೆಳೆದಿದೆ. ದಿನದಿಂದ ದಿನಕ್ಕೆ ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿದ್ದು, ಇತಿಹಾಸ ಮತ್ತು ಪುರಾತತ್ವದ ಮೇಲೆ ಆಸಕ್ತಿ ಹೊಂದಿರುವ ಅನೇಕರು ಸ್ಥಳಕ್ಕೆ ಭೇಟಿ ನೀಡಿ ಉತ್ಖನನ ಪ್ರಕ್ರಿಯೆಯನ್ನು ಕಣ್ತುಂಬಿಕೊಳ್ಳುತ್ತಿದ್ದಾರೆ. ಸುರಕ್ಷತೆ ಹಾಗೂ ಪುರಾತನ ವಸ್ತುಗಳ ಸಂರಕ್ಷಣೆಯ ದೃಷ್ಟಿಯಿಂದ ಹೆಚ್ಚಿನ ನಿಗಾವಹಿಸಲು ಆಡಳಿತ ಕ್ರಮ ಕೈಗೊಂಡಿದೆ.



## ಬಾಂಬ್ ಬೆದರಿಕೆ ಹಾಕಿದ ಯುವಕನ ಬಂಧನ



**ಬೆಂಗಳೂರು:** ಅಹಮದಾಬಾದ್‌ಗೆ ಪ್ರಯಾಣಿಸಲು ಬಂದಿದ್ದ ವ್ಯಕ್ತಿಯೊಬ್ಬರು ಹುಸಿ ಬಾಂಬ್ ಬೆದರಿಕೆ ಹಾಕಿದ ಘಟನೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಆತಂಕ ಮೂಡಿಸಿದೆ. ಅಬು ಅಕಿಲ್ ಎಂಬ ಪ್ರಯಾಣಿಕನು ಪ್ರವೇಶದ ವೇಳೆ ನಡೆದ ಭದ್ರತಾ ತಪಾಸಣೆಗೆ ಅಸಮಾಧಾನಗೊಂಡು ತನ್ನ ಬ್ಯಾಗ್‌ನಲ್ಲಿ ಎರಡು ಸಣ್ಣ ಬಾಂಬ್‌ಗಳಿವೆ ಎಂದು ಹೇಳಿದ ಆರೋಪ ಎದುರಿಸುತ್ತಿದ್ದಾನೆ.

ವಿಮಾನ ನಿಲ್ದಾಣದ ಭದ್ರತಾ ನಿಯಮಾನುಸಾರ ಪ್ರಯಾಣಿಕರ ಬ್ಯಾಗ್‌ಗಳನ್ನು ಎರಡು ಹಂತಗಳಲ್ಲಿ ಪರಿಶೀಲಿಸಲಾಗುತ್ತದೆ. ಇದೇ ಕ್ರಮದ ಭಾಗವಾಗಿ ಅಬು ಅಕಿಲ್ ಅವರ ಬ್ಯಾಗ್ ಪರಿಶೀಲನೆ ನಡೆದಿತ್ತು. ಈ ವೇಳೆ ತಪಾಸಣೆ ವಿಳಂಬವಾಗುತ್ತಿದೆ ಎಂಬ ಅಸಮಾಧಾನ ವ್ಯಕ್ತಪಡಿಸಿದ ಆತ, ಭದ್ರತಾ ಸಿಬ್ಬಂದಿಯನ್ನು ಬೆದರಿಸುವ ಉದ್ದೇಶದಿಂದ ಬಾಂಬ್ ಇರುವ ಬಗ್ಗೆ ಹೇಳಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆದರಿಕೆ ಮಾಹಿತಿ ತಿಳಿದ ತಕ್ಷಣ ಏರ್‌ಪೋರ್ಟ್ ಭದ್ರತಾ ಸಿಬ್ಬಂದಿ ಹೈಅಲರ್ಟ್ ಘೋಷಿಸಿ, ಆರೋಪಿಯನ್ನು ತಕ್ಷಣ ವಶಕ್ಕೆ ಪಡೆದರು. ನಂತರ ಬಾಂಬ್ ನಿಷ್ಕ್ರಿಯ ದಳ ಮತ್ತು ಭದ್ರತಾ ತಜ್ಞರು ಬ್ಯಾಗ್‌ನ್ನು ಸಂಪೂರ್ಣವಾಗಿ ಪರಿಶೀಲಿಸಿದರು. ಪರಿಶೀಲನೆ ವೇಳೆ ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗಿಲ್ಲ. ಆದರೂ ಭದ್ರತಾ ನಿಯಮ ಉಲ್ಲಂಘಿಸಿ ಹುಸಿ ಬೆದರಿಕೆ ಹಾಕಿದ ಹಿನ್ನೆಲೆಯಲ್ಲಿ ಆರೋಪಿಯನ್ನು ಏರ್‌ಪೋರ್ಟ್ ಪೊಲೀಸ್ ಠಾಣೆ ಪೊಲೀಸರಿಗೆ ಹಸ್ತಾಂತರಿಸಲಾಗಿದೆ.

ಈ ಸಂಬಂಧ ಪ್ರಕರಣ ದಾಖಲಾಗಿದ್ದು, ಆರೋಪಿಯನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಲಾಗಿದೆ. ವಿಮಾನ ನಿಲ್ದಾಣದಂತಹ ಅತಿಸೂಕ್ಷ್ಮ ಪ್ರದೇಶಗಳಲ್ಲಿ ಇಂತಹ ಹೇಳಿಕೆಗಳನ್ನು ಗಂಭೀರವಾಗಿ ಪರಿಗಣಿಸಲಾಗುತ್ತದೆ ಎಂದು ಪೊಲೀಸರು ಎಚ್ಚರಿಕೆ ನೀಡಿದ್ದಾರೆ. ಪ್ರಯಾಣಿಕರ ಸುರಕ್ಷತೆ ಪ್ರಮುಖವಾಗಿದ್ದು, ಯಾವುದೇ ರೀತಿಯ ಹುಸಿ ಬೆದರಿಕೆಗೂ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದ್ದಾರೆ. ಇತ್ತೀಚಿನ ತಿಂಗಳಲ್ಲಿ ಕೆಂಪೇಗೌಡ ವಿಮಾನ ನಿಲ್ದಾಣಕ್ಕೆ ಸಂಬಂಧಿಸಿದ ಹುಸಿ ಬೆದರಿಕೆ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಕಳೆದ ನವೆಂಬರ್‌ನಲ್ಲಿ ಉಗ್ರ ಸಂಘಟನೆ ಹೆಸರಿನಲ್ಲಿ ಬಾಂಬ್ ಬೆದರಿಕೆ ಇ-ಮೇಲ್ ಬಂದಿತ್ತು. ನವೆಂಬರ್ 30ರಂದು ಜೈಷ್-ಇ-ಮೊಹಮ್ಮದ್ ಹೆಸರಿನಲ್ಲಿ ವಿಮಾನ ನಿಲ್ದಾಣ ಹಾಗೂ ಪ್ರಮುಖ ಮಾಲ್‌ಗಳನ್ನು ಸ್ಫೋಟಿಸುವುದಾಗಿ ಬೆದರಿಕೆ ಸಂದೇಶ ರವಾನೆಯಾಗಿತ್ತು. ಜನವರಿ 14ರಂದು ಟರ್ಮಿನಲ್‌ಗಳಲ್ಲಿ ಆತ್ಮಾಹುತಿ ದಾಳಿ ನಡೆಸುವುದಾಗಿ ಮತ್ತೊಂದು ಇ-ಮೇಲ್ ಬೆದರಿಕೆ ಬಂದಿತ್ತು.

ಅದೇ ರೀತಿ ಕಳೆದ ವರ್ಷ 'ಏರೋ ಇಂಡಿಯಾ' ವೈಮಾನಿಕ ಪ್ರದರ್ಶನದ ವೇಳೆಯೂ ಡ್ರೋನ್ ದಾಳಿ ಬೆದರಿಕೆ ಸಂದೇಶ ಲಭ್ಯವಾಗಿತ್ತು. 2025ರ ಅಕ್ಟೋಬರ್ 22ರಿಂದ 28ರವರೆಗೆ ನಿರಂತರವಾಗಿ ಹಲವು ಹುಸಿ ಬಾಂಬ್ ಬೆದರಿಕೆಗಳು ಬಂದಿದ್ದವು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ವಿಮಾನ ನಿಲ್ದಾಣದಲ್ಲಿ ಭದ್ರತಾ ಕ್ರಮಗಳನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ

## ಮದ್ವೆ ಆರತಕ್ಷತೆಗೆ ತೆರಳುತ್ತಿದ್ದ ವರನಿಗೆ ಚೂರಿ ಇರಿತ



**ಚಾಮರಾಜನಗರ:** ಮದುವೆಯ ಆರತಕ್ಷತೆಗೆ ತೆರಳುತ್ತಿದ್ದ ವರನ ಕಾರು ಅಡ್ಡಗಟ್ಟಿ ಚಾಕು ಹಾಗೂ ಡ್ರ್ಯಾಗರ್‌ನಿಂದ ಹಲ್ಲೆ ನಡೆಸಿದ ಘಟನೆ ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದಲ್ಲಿ ಭಾರೀ ಆತಂಕ ಮೂಡಿಸಿದೆ. ರವೀಶ್ ಎಂಬ ಯುವಕ ಆರತಕ್ಷತೆ ಕಾರ್ಯಕ್ರಮಕ್ಕೆ ಹೋಗುವ ಮಾರ್ಗ ಮಧ್ಯೆ ಅಪರಿಚಿತರಿಂದ ಗುರಿಯಾಗಿದ್ದಾನೆ.

ಕೊಳ್ಳೇಗಾಲದ ವೆಂಕಟೇಶ್ವರ್ ಮಹಲ್‌ನಲ್ಲಿ ಆಯೋಜಿಸಿದ್ದ ಆರತಕ್ಷತೆ ಕಾರ್ಯಕ್ರಮಕ್ಕೆ ವರ ರವೀಶ್ ತನ್ನ ಗ್ರಾಮ ಕುಣಗಳ್ಳಿಯಿಂದ ಕಾರಿನಲ್ಲಿ ತೆರಳುತ್ತಿದ್ದ. ಈ ವೇಳೆ ಸಿನೆಮಾ ದೃಶ್ಯವನ್ನೇ ನೆನಪಿಸುವ ರೀತಿಯಲ್ಲಿ ದುಷ್ಕರ್ಮಿಗಳು ಕಾರು ಅಡ್ಡಗಟ್ಟಿದ್ದಾರೆ. "ನೀನು ಮದುವೆ ಮನೆಗೆ ಅಲ್ಲ, ಸ್ಮಶಾನಕ್ಕೆ ಹೋಗಬೇಕು" ಎಂದು ಬೆದರಿಕೆ ಹಾಕಿ ಏಕಾಏಕಿ ಚಾಕು ಹಾಗೂ ಚೂರಿಯಿಂದ ಮನಸ್ಸೋ ಇಚ್ಛೆ ಹಲ್ಲೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ. ಹಲ್ಲೆ ವೇಳೆ ರವೀಶ್ ಅವರನ್ನು ಬೆನ್ನಟ್ಟಿದ ಆರೋಪಿಗಳು ಬೆನ್ನಿಗೆ ಚೂರಿಯಿಂದ ಇರಿದು ಬಳಿಕ ಸ್ಥಳದಿಂದ ಪರಾರಿಯಾಗಿದ್ದಾರೆ.

ಮದುವೆ ನಿಶ್ಚಯಗೊಂಡು ಸುಮಾರು ಆರು ತಿಂಗಳು ಕಳೆದಿತ್ತು. ಜನವರಿ 30ರಂದು ಮದುವೆ ನಿಗದಿಯಾಗಿದ್ದ ಹಿನ್ನೆಲೆಯಲ್ಲಿ ಆರತಕ್ಷತೆ ಕಾರ್ಯಕ್ರಮಕ್ಕಾಗಿ ಕುಟುಂಬಸ್ಥರು ಸಿದ್ಧತೆ ನಡೆಸಿದ್ದರು. ಅದೇ ಸಂದರ್ಭದಲ್ಲಿ ಈ ದಾಳಿ ನಡೆದಿರುವುದು ಕುಟುಂಬಕ್ಕೆ ಭಾರೀ ಆಘಾತ ತಂದಿದೆ. ಕಲ್ಯಾಣ ಮಂಟಪಕ್ಕೆ ಕೆಲವೇ ದೂರ ಬಾಕಿ ಇರುವಾಗ ಈ ದಾಳಿ ನಡೆದಿರುವುದು ವಿಶೇಷ.

ಘಟನೆಯಲ್ಲಿ ರವೀಶ್ ಅವರ ಎಡಗೈಗೆ ಚಾಕು ತಗುಲಿದ್ದು, ತಕ್ಷಣ ಅವರನ್ನು ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ವೈದ್ಯರು ಚಿಕಿತ್ಸೆ ನೀಡುತ್ತಿದ್ದು, ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಯಗೊಂಡ ಸ್ಥಿತಿಯಲ್ಲಿಯೇ ಅವರು ಮಾತನಾಡಿ, "ನನಗೆ ಯಾರು ಹಲ್ಲೆ ಮಾಡಿದ್ದಾರೆ ಎನ್ನುವುದು ಗೊತ್ತಿಲ್ಲ. ಹಿಂಬದಿಯಿಂದ ಬಂದ ಕಾರಿನಿಂದ ಏಕಾಏಕಿ ದಾಳಿ ಮಾಡಿದರು" ಎಂದು ತಿಳಿಸಿದ್ದಾರೆ.

ಈ ದಾಳಿಯ ಹಿಂದೆ ವಧುವಿನ ಮಾಜಿ ಪ್ರಿಯಕರನ ಕೈವಾಡ ಇರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಆದರೆ ಇದುವರೆಗೆ ಯಾವುದೇ ಅಧಿಕೃತ ದೃಢೀಕರಣವಾಗಿಲ್ಲ. ಪ್ರಕರಣ ದಾಖಲಿಸಿಕೊಂಡಿರುವ ಕೊಳ್ಳೇಗಾಲ ಪಟ್ಟಣ ಠಾಣೆ ಪೊಲೀಸರು ಆರೋಪಿಗಳ ಬಂಧನಕ್ಕಾಗಿ ಶೋಧ ಕಾರ್ಯಾಚರಣೆ ಆರಂಭಿಸಿದ್ದಾರೆ. ಸಿಸಿಟಿವಿ ದೃಶ್ಯಗಳು ಹಾಗೂ ಸ್ಥಳೀಯ ಮಾಹಿತಿ ಆಧರಿಸಿ ತನಿಖೆ ಮುಂದುವರಿದಿದೆ.

ಮದುವೆ ಸಂಭ್ರಮದ ನಡುವೆ ನಡೆದ ಈ ಹಲ್ಲೆ ಘಟನೆ ಸ್ಥಳೀಯರಲ್ಲಿ ಆತಂಕ ಸೃಷ್ಟಿಸಿದ್ದು, ಕುಟುಂಬಸ್ಥರು ಆರೋಪಿಗಳನ್ನು ಶೀಘ್ರ ಬಂಧಿಸುವಂತೆ ಆಗ್ರಹಿಸಿದ್ದಾರೆ. ಪೊಲೀಸರು ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದು, ಆರೋಪಿಗಳನ್ನು ಶೀಘ್ರ ಪತ್ತೆಹಚ್ಚುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಒಂದಲ್ಲ, ಎರಡಲ್ಲ ಆಕೆ ಆಗಿದ್ದು ಮೂರು ಮದುವೆ..!



**ಬೆಂಗಳೂರು ಗ್ರಾಮಾಂತರ:** ಜಿಲ್ಲೆಯಲ್ಲಿ ಮದುವೆ ಹೆಸರಿನಲ್ಲಿ ಹಣ ವಂಚಿಸಿದ ಅಚ್ಚರಿಯ ಪ್ರಕರಣ ಬೆಳಕಿಗೆ ಬಂದಿದೆ. ದೊಡ್ಡಬಳ್ಳಾಪುರ ತಾಲೂಕಿನ ಅಣಬೆ ಗ್ರಾಮ ಮೂಲದ ಮಹಿಳೆಯೊಬ್ಬಳು ಪ್ರೀತಿ ಮತ್ತು ಮದುವೆ ಎಂಬ ನೆಪದಲ್ಲಿ ಮೂವರು ಪುರುಷರೊಂದಿಗೆ ಸಂಬಂಧ ಬೆಳೆಸಿ, ಇಬ್ಬರು ಗಂಡಂದಿರಿಗೆ ಮೋಸ ಮಾಡಿ ಲಕ್ಷಾಂತರ ರೂಪಾಯಿ ಹಣ ಪಡೆದು ಮೂರನೇ ವ್ಯಕ್ತಿಯೊಂದಿಗೆ ಪರಾರಿಯಾಗಿರುವ ಆರೋಪ ಎದುರಿಸುತ್ತಿದ್ದಾಳೆ. ಸುಧಾರಾಣಿ ಎಂಬ ಮಹಿಳೆ ಈ ವಂಚನೆ ಪ್ರಕರಣದ ಪ್ರಮುಖ ಆರೋಪಿ ಎಂದು ಹೇಳಲಾಗಿದೆ.

ಪೊಲೀಸ್ ದೂರುಗಳ ಪ್ರಕಾರ, ಸುಧಾರಾಣಿ ಮೊದಲಿಗೆ ವೀರೆಗೌಡ ಎಂಬ ಯುವಕನನ್ನು ಪ್ರೀತಿಸಿ ಮದುವೆಯಾಗಿದ್ದಳು. ಈ ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಆದರೆ ಕುಟುಂಬ ಜೀವನದಲ್ಲಿ ಅಸಮಾಧಾನ ಉಂಟಾಗಿ, ಪತಿಗೆ ಕಾರು ಹಾಗೂ ಬೈಕ್ ಓಡಿಸಲು ಬಾರದು ಎಂಬ ಕಾರಣವನ್ನೇ ಮುಂದಿಟ್ಟು, ಮಕ್ಕಳನ್ನು ಬಿಟ್ಟು ಮೊದಲ ಪತಿಯಿಂದ ದೂರವಾಗಿದ್ದಾಳೆ ಎಂಬ ಆರೋಪ ಕೇಳಿಬಂದಿದೆ. ಕುಟುಂಬದ ಜವಾಬ್ದಾರಿಗಳನ್ನು ಬಿಟ್ಟು ಹೊರಟ ನಂತರ ಆಕೆ ಹೊಸ ಸಂಬಂಧಕ್ಕಾಗಿ ಮತ್ತೊಬ್ಬ ಯುವಕನನ್ನು ಸಂಪರ್ಕಿಸಿದ್ದಾಳೆ.

ಮೊದಲ ಪತಿಯಿಂದ ದೂರವಾದ ಬಳಿಕ, ಡೆಲಿವರಿ ಬಾಯ್ ಆಗಿದ್ದ ಅನಂತಮೂರ್ತಿ ಎಂಬ ಯುವಕನೊಂದಿಗೆ ಆಕೆಗೆ ಪರಿಚಯವಾಗಿದೆ. ತನ್ನ ಮೊದಲ ಪತಿ ಸಾವನ್ನಪ್ಪಿದ್ದಾನೆ ಎಂದು ಸುಳ್ಳು ಹೇಳಿ ಆತನನ್ನು ನಂಬಿಸಿದ್ದಾಳೆ ಎನ್ನಲಾಗಿದೆ. ನಂತರ ದೇವಸ್ಥಾನದಲ್ಲಿ ಸರಳವಾಗಿ ಮದುವೆಯಾಗಿದ್ದು, ದಾಂಪತ್ಯ ಜೀವನ ಆರಂಭಿಸಿದ್ದಾಳೆ. ಈ ಅವಧಿಯಲ್ಲಿ ವಿವಿಧ ಅಗತ್ಯಗಳ ನೆಪದಲ್ಲಿ ಅನಂತಮೂರ್ತಿಯಿಂದ ಸುಮಾರು 15 ರಿಂದ 20 ಲಕ್ಷ ರೂಪಾಯಿ ಹಣ ಪಡೆದಿದ್ದಾಳೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಆದರೆ ಹಣ ಪಡೆದ ಬಳಿಕ ಆತನಿಂದಲೂ ದೂರವಾಗಿ, ಕನಕಪುರ ಮೂಲದ ಇನ್ನೊಬ್ಬ ವ್ಯಕ್ತಿಯನ್ನು ಮೂರನೇ ಬಾರಿ ಮದುವೆಯಾಗಿದ್ದಾಳೆ ಎನ್ನಲಾಗಿದೆ. ಹೀಗಾಗಿ ಈ ವಂಚನೆ ಬೆಳಕಿಗೆ ಬಂದಿದೆ. ಮೊದಲ ಪತಿ ವೀರೆಗೌಡ ಹಾಗೂ ಎರಡನೇ ಪತಿ ಅನಂತಮೂರ್ತಿ ಇಬ್ಬರೂ ದೊಡ್ಡಬಳ್ಳಾಪುರ ಪೊಲೀಸ್ ಠಾಣೆಗೆ ಪ್ರತ್ಯೇಕವಾಗಿ ದೂರು ನೀಡಿದ್ದಾರೆ.

ಸುಧಾರಾಣಿ ಹಣವಿರುವ ಯುವಕರನ್ನು ಗುರಿಯಾಗಿಸಿಕೊಂಡು ಪ್ರೀತಿ ಮತ್ತು ಮದುವೆ ಹೆಸರಿನಲ್ಲಿ ನಂಬಿಸಿ, ಬಳಿಕ ಹಣ ಪಡೆದು ಪರಾರಿಯಾಗುತ್ತಿದ್ದಾಳೆ ಎಂದು ದೂರಿನಲ್ಲಿ ಆ ರೋ ಪಿ ಸ ಲಾ ಗಿ ದೆ . ಮದುವೆಯನ್ನೇ ವೃತ್ತಿಯಂತೆ ಮಾಡಿಕೊಂಡು ವಂಚನೆ ನಡೆಸುತ್ತಿದ್ದಾಳೆ ಎಂಬ ಆಕ್ರೋಶ ವ್ಯಕ್ತವಾಗಿದೆ.

ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ವಂಚನೆ, ನಂಬಿಕೆ ದ್ರೋಹ ಹಾಗೂ ಮೋಸದ ಆರೋಪಗಳಡಿ ತನಿಖೆ ಆರಂಭಿಸಿದ್ದಾರೆ. ಸುಧಾರಾಣಿಯ ಚಲನವಲನಗಳ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ಆಕೆಯನ್ನು ಬಂಧಿಸಲು ವಿಶೇಷ ತಂಡ ರಚಿಸಲಾಗಿದೆ ಎಂದು ತಿಳಿದುಬಂದಿದೆ. ಇನ್ನಷ್ಟು ಜನರು ಈ ರೀತಿಯ ವಂಚನೆಗೆ ಒಳಗಾಗಿರುವ ಸಾಧ್ಯತೆ ಇರುವುದರಿಂದ ಪ್ರಕರಣದ ವ್ಯಾಪ್ತಿ ವಿಸ್ತರಿಸುವ ಸಾಧ್ಯತೆಯೂ ಇದೆ. ಪೊಲೀಸರು ಎಲ್ಲಾ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದಾರೆ.



# ಹೋಂವರ್ಕ್ ಮಾಡಿಲ್ಲ ಎಂದು ಬಾಲಕನ ಮೇಲೆ ಹಲ್ಲೆ!

**ಬೆಂಗಳೂರು:** ಹೋಂವರ್ಕ್ ಮಾಡಿಲ್ಲ ಎಂಬ ಕಾರಣಕ್ಕೆ ನಾಲ್ಕನೇ ತರಗತಿ ವಿದ್ಯಾರ್ಥಿಯ ಮೇಲೆ ಶಿಕ್ಷಕಿ ಕ್ರೂರವಾಗಿ ಹಲ್ಲೆ ನಡೆಸಿದ ಆರೋಪದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಜನವರಿ 10ರಂದು ನಂದಿನಿ ಲೇಔಟ್‌ನಲ್ಲಿರುವ ವೀಣಾ ವಿದ್ಯಾ ಸಂಸ್ಥೆಯಲ್ಲಿ ಈ ಘಟನೆ ನಡೆದಿದೆ ಎನ್ನಲಾಗಿದ್ದು, ಶಿಕ್ಷಕಿ ಆಂಗ್ಲಿನ್ ಎಂಬವರು ಬಾಲಕನಿಗೆ ಬಾಸುಂಡೆ ಬರುವ ಮಟ್ಟಿಗೆ ಥಳಿಸಿದ್ದಾಗಿ ಆರೋಪಿಸಲಾಗಿದೆ. ಈ ಸಂಬಂಧ ಬಾಲಕನ ತಾಯಿ ಲಕ್ಷ್ಮೀ ನಂದಿನಿ ಲೇಔಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಮೂಲತಃ ಮಹಾರಾಷ್ಟ್ರದಲ್ಲಿ ಕೆಲಸ ಮಾಡುತ್ತಿದ್ದ ಲಕ್ಷ್ಮೀ ತಮ್ಮ ಮಗನನ್ನು ಬೆಂಗಳೂರಿನ ಹಾಸ್ಟೆಲ್‌ನಲ್ಲಿ ಇರಿಸಿ ವಿದ್ಯಾಭ್ಯಾಸ ಮಾಡಿಸುತ್ತಿದ್ದರು. ಇತ್ತೀಚೆಗೆ ಮಗನನ್ನು ಭೇಟಿ ಮಾಡಲು ಬಂದ ವೇಳೆ, ಬಾಲಕನ ಕೈ ಹಾಗೂ ದೇಹದ ಮೇಲೆ ಸ್ಪಷ್ಟವಾದ ಬಾಸುಂಡೆ ಗುರುತುಗಳನ್ನು ಗಮನಿಸಿ ಬೆಚ್ಚಿಬಿದ್ದಿದ್ದಾರೆ. ತಾಯಿಯನ್ನು ಕಂಡ ಕೂಡಲೇ ಬಾಲಕ ಅಳುತ್ತಾ, ಹೋಂವರ್ಕ್ ಮಾಡದ ಕಾರಣ ಶಿಕ್ಷಕಿ ತನ್ನನ್ನು ನಿರಂತರವಾಗಿ ಥಳಿಸುತ್ತಿದ್ದಾಳೆ ಎಂದು ಹೇಳಿದ್ದಾನೆ. ಹಲ್ಲೆ ವಿಚಾರವನ್ನು ಪೋಷಕರಿಗೆ ತಿಳಿಸಿದರೆ ಕುತ್ತಿಗೆ ಹಿಸುಕುವುದಾಗಿ ಶಿಕ್ಷಕಿ ಬೆದರಿಕೆ ಹಾಕಿದ್ದರಿಂದ ಭಯದಿಂದ ಇದುವರೆಗೆ ಯಾರಿಗೂ ಏನೂ ಹೇಳಿರಲಿಲ್ಲವೆಂದು ಬಾಲಕ ಕಣ್ಣೀರಿಟ್ಟು ವಿವರಿಸಿದ್ದಾನೆ.

ಈ ಘಟನೆ ತಿಳಿದ ಬಳಿಕ ಲಕ್ಷ್ಮೀ ಶಾಲೆಯ ಮುಖ್ಯಸ್ಥರನ್ನು ಪ್ರಶ್ನಿಸಿ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಪೊಲೀಸರನ್ನೂ ಕರೆಸಿ ಶಿಕ್ಷಕಿಯನ್ನು ಅಮಾನತುಗೊಳಿಸುವಂತೆ ಆಗ್ರಹಿಸಿದ್ದರು. ಆದರೆ ನಂತರವೂ ಶಾಲಾ ಆಡಳಿತದಿಂದ ಸ್ಪಷ್ಟ ಕ್ರಮ ಕೈಗೊಳ್ಳದಿರುವುದು ತಾಯಿಯ ಅಸಮಾಧಾನಕ್ಕೆ ಕಾರಣವಾಗಿದೆ. ಈ ಮಧ್ಯೆ ಭಯಗೊಂಡ ಬಾಲಕ ಶಾಲೆಗೆ ಹೋಗುವುದನ್ನೇ ನಿಲ್ಲಿಸಿದ್ದಾನೆ. ಶಿಕ್ಷಕಿ ಅಮಾನತುಗೊಂಡಿರಬಹುದು ಎಂಬ ಭಾವನೆಯಿಂದ ಮಗನನ್ನು ಮತ್ತೆ ಶಾಲೆಗೆ ಕಳುಹಿಸಲು ಯತ್ನಿಸಿದಾಗ, ಯಾವುದೇ ಅಮಾನತು ಕ್ರಮ ಕೈಗೊಳ್ಳಲಾಗಿಲ್ಲವೆಂದು ತಿಳಿದು ಬಂದಿದೆ. ಈ ಬಗ್ಗೆ ಮತ್ತೆ ಆಡಳಿತವನ್ನು ಪ್ರಶ್ನಿಸಿದರೂ ನಿರ್ಲಕ್ಷ್ಯ ತೋರಲಾಗಿದೆ ಎಂದು ಲಕ್ಷ್ಮೀ ಆರೋಪಿಸಿದ್ದಾರೆ. ಈ ಕುರಿತು ಬಾಲಕನ ತಾಯಿ ಲಕ್ಷ್ಮೀ ಮಾಧ್ಯಮಗಳಿಗೆ ನೀಡಿದ ಹೇಳಿಕೆಯಲ್ಲಿ, ಕಳೆದ ಎರಡು ತಿಂಗಳಿಂದ ಇಂಗ್ಲಿಷ್ ಶಿಕ್ಷಕಿ ಆಂಗ್ಲಿನ್ ತನ್ನ ಮಗನ ಮೇಲೆ ಹಲ್ಲೆ ನಡೆಸುತ್ತಿದ್ದು, ಪೋಷಕರಿಗೆ ಹೇಳಿದರೆ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ



ಎಂದು ಬೆದರಿಕೆ ಹಾಕುತ್ತಿದ್ದಾಳೆ ಎಂಬುದು ಮಗುವಿನಿಂದ ತಿಳಿದು ಬಂದಿದೆ ಎಂದು ಹೇಳಿದ್ದಾರೆ. ಎಫ್‌ಐಆರ್ ದಾಖಲಾಗಿದ್ದರೂ ಶಿಕ್ಷಕಿಯ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳದಿರುವುದಕ್ಕೆ ಶಾಲಾ ಆಡಳಿತ ಮಂಡಳಿಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿರುವ ಅವರು, ಇದೀಗ ಬಿಇಒ ಕಚೇರಿಗೆ ಅಧಿಕೃತ ದೂರು ನೀಡಲು ಮುಂದಾಗಿದ್ದಾರೆ.


ಘಟನೆಯಿಂದ ಆತಂಕಗೊಂಡ ಬಾಲಕ ಮಾನಸಿಕವಾಗಿ ಕೂಡ ಬೆಚ್ಚಿಬಿದ್ದಿದ್ದು, ಶಾಲೆಗೆ ಹೋಗಲು ನಿರಾಕರಿಸುತ್ತಿರುವುದಾಗಿ ಕುಟುಂಬದವರು ತಿಳಿಸಿದ್ದಾರೆ. ಮಕ್ಕಳ ಸುರಕ್ಷತೆ ಮತ್ತು ಶಾಲೆಯ ಹೊಣೆಗಾರಿಕೆ ಕುರಿತು ಗಂಭೀರ ಪ್ರಶ್ನೆಗಳು ಎದ್ದಿರುವ ಈ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ ನ್ಯಾಯ ಒದಗಿಸಬೇಕು ಎಂಬುದು ಪೋಷಕರ ಒತ್ತಾಯವಾಗಿದೆ.



# ತಂದೆ-ತಾಯಿ, ಸಹೋದರಿಯನ್ನು ಕೊಂದ ಯುವಕ

**ವಿಜಯನಗರ:** ಹೆತ್ತ ತಂದೆ-ತಾಯಿ ಹಾಗೂ ಒಡಹುಟ್ಟಿದ ಸಹೋದರಿಯನ್ನೇ ವ್ಯಕ್ತಿಯೋರ್ವ ಬರ್ಬರವಾಗಿ ಹತ್ಯೆ ಮಾಡಿದ ಶಂಕಾಸ್ಪದ ಪ್ರಕರಣ ವಿಜಯನಗರ ಜಿಲ್ಲೆಯ ಕೊಟ್ಟೂರು ಪಟ್ಟಣದಲ್ಲಿ ಬೆಳಕಿಗೆ ಬಂದಿದ್ದು, ಸ್ಥಳೀಯರಲ್ಲಿ ತೀವ್ರ ಆತಂಕ ಮೂಡಿಸಿದೆ. ಅಕ್ಷಯ ಕುಮಾರ ಎಂಬಾತ ಈ ಮೂವರ ಹತ್ಯೆಗೆ ಕಾರಣನೆಂದು ಶಂಕಿಸಲಾಗಿದ್ದು, ಪ್ರಕರಣದ ಹಿನ್ನಲೆ ಹಾಗೂ ನಿಖರ ಕಾರಣ ಇನ್ನೂ ಸ್ಪಷ್ಟವಾಗಿಲ್ಲ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಕೊಲೆಗೈದ ಆರೋಪಿತ ಅಕ್ಷಯ ಕುಮಾರ ಬೆಂಗಳೂರುಗೆ ತೆರಳಿ ತನ್ನ ತಂದೆ, ತಾಯಿ ಹಾಗೂ ಸಹೋದರಿ ನಾಪತ್ತೆಯಾಗಿದ್ದಾರೆ ಎಂದು ಅಲ್ಲಿನ ತಿಲಕ್‌ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದ. ಕುಟುಂಬದ ಸದಸ್ಯರು ಕಾಣೆಯಾಗಿದ್ದಾರೆ ಎಂದು ಹೇಳಿ ಪೊಲೀಸರನ್ನು ದಾರಿ ತಪ್ಪಿಸಲು ಯತ್ನಿಸಿದ್ದಾನೆ ಎಂಬ ಶಂಕೆ ವ್ಯಕ್ತವಾಗಿದೆ. ದೂರು ಸ್ವೀಕರಿಸಿದ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತನಿಖೆ ಆರಂಭಿಸಿದ್ದರು.



ಪೊ ಲೀ ಸ ರ ವಿಚಾರಣೆ ವೇಳೆ ಆರೋಪಿ ನೀಡಿದ ಹೇಳಿಕೆಗಳಲ್ಲಿ ಹಲವಾರು ವೈರುಧ್ಯಗಳು ಕಂಡುಬಂದ ಹಿನ್ನೆಲೆಯಲ್ಲಿ ಅನುಮಾನಗೊಂಡ ತಿಲಕ್‌ನಗರ ಠಾಣೆ ಪೊಲೀಸರು ಅಕ್ಷಯ ಕುಮಾರನನ್ನು ತೀವ್ರವಾಗಿ ವಿಚಾರಣೆ ನಡೆಸಿದ್ದಾರೆ. ವಿಚಾರಣೆ ವೇಳೆ ಆತ ಕೊಲೆ ಬಗ್ಗೆ ಅಸ್ಪಷ್ಟ ಹಾಗೂ ಪರಸ್ಪರ ವಿರೋಧಾಭಾಸದ ಹೇಳಿಕೆಗಳನ್ನು ನೀಡಿದ್ದಾನೆ. ಒಂದು ವೇಳೆ ವಿಜಯನಗರ ಜಿಲ್ಲೆಯ ಕೊಟ್ಟೂರಿನ ಮನೆಯಲ್ಲಿ ಮೂವರನ್ನೂ ಹತ್ಯೆ ಮಾಡಿ ಅಲ್ಲಿಯೇ ಹೂತಿದ್ದೇನೆ ಎಂದು ಹೇಳಿದರೆ, ಮತ್ತೊಂದು ವೇಳೆ ಸಂಡೂರಿನ ಬಳಿ ಶವಗಳನ್ನು ಎಸೆದಿರುವುದಾಗಿ ಹೇಳಿದ್ದಾನೆ ಎನ್ನಲಾಗಿದೆ.

ಆರೋಪಿಯ ಈ ಗೊಂದಲಕಾರಿ ಹೇಳಿಕೆಗಳಿಂದ ಪ್ರಕರಣ ಮತ್ತಷ್ಟು ಗಂಭೀರ ಸ್ವರೂಪ ಪಡೆದಿದ್ದು, ತಿಲಕ್‌ನಗರ ಠಾಣೆ ಪೊಲೀಸರು ತಕ್ಷಣವೇ ವಿಜಯನಗರ ಜಿಲ್ಲೆಯ ಕೊಟ್ಟೂರು ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಆ ಮಾಹಿತಿ ಆಧರಿಸಿ ಸ್ಥಳೀಯ ಪೊಲೀಸರು ಆರೋಪಿಯ ಹೇಳಿಕೆಯಲ್ಲಿ ಉಲ್ಲೇಖಿಸಿದ ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ಆರಂಭಿಸಿದ್ದಾರೆ. ಮನೆ ಸೇರಿದಂತೆ ಅನುಮಾನಾಸ್ಪದ ಪ್ರದೇಶಗಳಲ್ಲಿ ಶವಗಳಿಗಾಗಿ ಶೋಧ ಮುಂದುವರಿದಿದೆ.

ಮೃತರ ಹೆಸರು, ವಯಸ್ಸು ಹಾಗೂ ಹತ್ಯೆಗೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಕುಟುಂಬದೊಳಗಿನ ಕಲಹವೇ ಕಾರಣವೇ, ಅಥವಾ ಬೇರೆ ಯಾವುದೇ ಆರ್ಥಿಕ ಅಥವಾ ವೈಯಕ್ತಿಕ ಹಿನ್ನಲೆ ಇದೆಯೇ ಎಂಬುದರ ಕುರಿತು ಪೊಲೀಸರು ವಿವಿಧ ಕೋನಗಳಲ್ಲಿ ತನಿಖೆ ನಡೆಸುತ್ತಿದ್ದಾರೆ. ಆರೋಪಿ ಮಾನಸಿಕ ಸ್ಥಿತಿ, ಕುಟುಂಬದ ಇತ್ತೀಚಿನ ಪರಿಸ್ಥಿತಿ ಹಾಗೂ ನೆರೆಹೊರೆಯವರ ಹೇಳಿಕೆಗಳನ್ನು ಕೂಡ ಪೊಲೀಸರು ಸಂಗ್ರಹಿಸುತ್ತಿದ್ದಾರೆ.

ಘಟನೆ ಬೆಳಕಿಗೆ ಬಂದ ನಂತರ ಕೊಟ್ಟೂರು ಪಟ್ಟಣದಲ್ಲಿ ಭೀತಿಯ ವಾತಾವರಣ ನಿರ್ಮಾಣವಾಗಿದ್ದು, ಇಂತಹ ಕ್ರೂರ ಘಟನೆ ಹೇಗೆ ಸಂಭವಿಸಿತು ಎಂಬುದರ ಬಗ್ಗೆ ಸಾರ್ವಜನಿಕರಲ್ಲಿ ಆಘಾತ ವ್ಯಕ್ತವಾಗಿದೆ. ಪ್ರಕರಣದ ಸತ್ಯಾಸತ್ಯತೆ ಹೊರತೆಗೆದು ಮೃತರಿಗೆ ನ್ಯಾಯ ಒದಗಿಸಬೇಕೆಂದು ಸ್ಥಳೀಯರು ಆಗ್ರಹಿಸುತ್ತಿದ್ದಾರೆ. ತನಿಖೆ ಮುಂದುವರಿದಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ವಿವರಗಳು ಬಹಿರಂಗವಾಗುವ ಸಾಧ್ಯತೆ ಇದೆ.

## ಭ್ರಷ್ಟಾಚಾರ ಶಂಕೆ: ಕಿಮ್ಸ್ ಅಧಿಕಾರಿ ವಿರುದ್ಧ ಲೋಕಾಯುಕ್ತ ದಾಳಿ

**ಕೊಪ್ಪಳ:** ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ಭಾರೀ ದಾಳಿ ನಡೆಸಿ ಕಿಮ್ಸ್ ಆಡಳಿತಾಧಿಕಾರಿ ಬಿ. ಕಲ್ಲೇಶ್ ಅವರ ನಿವಾಸ, ಕಚೇರಿ ಹಾಗೂ ಸಂಬಂಧಿಕರ ಮನೆಗಳಲ್ಲಿ ಏಕಕಾಲಕ್ಕೆ ಶೋಧ ಕಾರ್ಯಾಚರಣೆ ಕೈಗೊಂಡಿದ್ದಾರೆ. ಒಟ್ಟು ಆರು ಸ್ಥಳಗಳಲ್ಲಿ ನಡೆದ ಈ ದಾಳಿ ಜಿಲ್ಲೆಯಲ್ಲಿ ಚರ್ಚೆಗೆ ಕಾರಣವಾಗಿದೆ.

ಕೊಪ್ಪಳ ತಾಲೂಕಿನ ಭಾಗ್ಯನಗರ ದಲ್ಲಿರುವ ಬಿ. ಕಲ್ಲೇಶ್ ಅವರ ಸ್ವಂತ ನಿವಾಸಕ್ಕೆ ಬೆಳಗ್ಗೆಯೇ ಅಧಿಕಾರಿಗಳು ತೆರಳಿ ಪರಿಶೀಲನೆ ಆರಂಭಿಸಿದರು. ಇದೇ ವೇಳೆ ಕಿಮ್ಸ್ ಕಾಲೇಜಿನ ಆಡಳಿತ ಕಚೇರಿ, ಸಂಬಂಧಿಕರ ಮನೆಗಳು ಸೇರಿದಂತೆ ವಿವಿಧ ಸ್ಥಳಗಳಲ್ಲಿ ಸಹ ಸಮಾಂತರವಾಗಿ ದಾಳಿ ನಡೆದಿದೆ. ಗದಗ, ಹಾವೇರಿ, ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳಿಂದ ಆಗಮಿಸಿದ ಲೋಕಾಯುಕ್ತ ಅಧಿಕಾರಿಗಳ ಸುಮಾರು 30 ಜನರ ವಿಶೇಷ ತಂಡ ಈ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದು, ದಾಖಲೆಗಳ ಸವಿಸ್ತಾರ ಪರಿಶೀಲನೆ ನಡೆಸುತ್ತಿದೆ.

ಈ ದಾಳಿ ಲೋಕಾಯುಕ್ತ ಡಿವೈಎಸ್ಪಿ ಲೋಕೇಶ್ ಅವರ ನೇತೃತ್ವದಲ್ಲಿ ನಡೆಯುತ್ತಿದ್ದು, ಅಕ್ರಮ ಆಸ್ತಿ ಗಳಿಕೆ ಹಾಗೂ ಆರ್ಥಿಕ ಅಕ್ರಮಗಳ ಬಗ್ಗೆ ಬಂದ ದೂರುಗಳ ಆಧಾರದ ಮೇಲೆ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ. ಮನೆ ಮತ್ತು ಕಚೇರಿಗಳಲ್ಲಿ ಪತ್ತೆಯಾದ ಆಸ್ತಿ ಪತ್ರಗಳು, ಬ್ಯಾಂಕ್ ಖಾತೆಗಳ ವಿವರಗಳು, ಹಣಕಾಸು ವ್ಯವಹಾರ ದಾಖಲೆಗಳು ಸೇರಿದಂತೆ ಹಲವು ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದು ಪರಿಶೀಲಿಸಲಾಗುತ್ತಿದೆ.

ಬಿ. ಕಲ್ಲೇಶ್ ಅವರ ಹೆಸರು ಈ ಹಿಂದೆ ಬಹುಚರ್ಚಿತ ವಾಲ್ಮೀಕಿ ನಿಗಮ ಹಗರಣದಲ್ಲಿ ಕೇಳಿಬಂದಿತ್ತು. ಆ ಪ್ರಕರಣದ ವೇಳೆ ಅವರು ಜಾರಿ ನಿರ್ದೇಶನಾಲಯದ ಕ್ರಮಗಳ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಲ್ಲದೆ, ನಂತರ ಅವರನ್ನು ಅಮಾನತುಗೊಳಿಸಲಾಗಿತ್ತು. ಇದೇ ಹಿನ್ನಲೆ ಇಂದಿನ ಲೋಕಾಯುಕ್ತ ದಾಳಿ ಹೆಚ್ಚಿನ ಮಹತ್ವ ಪಡೆದುಕೊಂಡಿದೆ ಎಂದು ಹೇಳಲಾಗುತ್ತಿದೆ.

ಶೋಧ ಕಾರ್ಯದ ವೇಳೆ ಲ್ಯಾಪ್‌ಟಾಪ್‌ಗಳು, ಮೊಬೈಲ್ ಫೋನ್‌ಗಳು, ಬ್ಯಾಂಕ್ ಪಾಸ್‌ಬುಕ್‌ಗಳು, ಚೆಕ್ ಬುಕ್‌ಗಳು, ಹೂಡಿಕೆ ಸಂಬಂಧಿತ ದಾಖಲೆಗಳು ಹಾಗೂ ಆಸ್ತಿ ಸಂಬಂಧಿಸಿದ ಕಾಗದ ಪತ್ರಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ದಾಳಿಯ ವೇಳೆ ಪತ್ತೆಯಾದ ಮಾಹಿತಿಗಳ ಆಧಾರದ ಮೇಲೆ ಮುಂದಿನ ಕಾನೂನು ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ.

ಕಾ ರ್ಯಾ ಚ ರ ಣೆ ಮುಂದುವರಿದಿದ್ದು, ಲೋಕಾಯುಕ್ತ ಅಧಿಕಾರಿಗಳು ಹೆಚ್ಚಿನ ವಿವರಗಳನ್ನು ಸಂಗ್ರಹಿಸುತ್ತಿದ್ದಾರೆ. ತನಿಖೆ ಪೂರ್ಣಗೊಂಡ ಬಳಿಕ ಅಕ್ರಮ ಆಸ್ತಿ ಮತ್ತು ಹಣಕಾಸು ವ್ಯವಹಾರಗಳ ಕುರಿತು ಸ್ಪಷ್ಟ ಚಿತ್ರಣ ಹೊರಬರುವ ನಿರೀಕ್ಷೆಯಿದೆ.

# ಕ್ರೀಡೆಯಿಂದ ದೈಹಿಕ-ಮಾನಸಿಕ ಆರೋಗ್ಯ ವೃದ್ಧಿ: ಕೆ.ಹೆಚ್ ಮುನಿಯಪ್ಪ



**ಬೆಂಗಳೂರು ಗ್ರಾಮಾಂತರ:** ಸರ್ಕಾರಿ ನೌಕರರು ದೈನಂದಿನ ವೃತ್ತಿಯ ಜೊತೆಗೆ ಕ್ರೀಡೆ, ವ್ಯಾಯಾಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ದೈಹಿಕವಾಗಿ, ಮಾನಸಿಕವಾಗಿ ಆರೋಗ್ಯ ವೃದ್ಧಿಯಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಹಯೋಗದಲ್ಲಿ ದೇವನಹಳ್ಳಿ ಟೌನ್ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ 2025-26 ನೇ ಸಾಲಿನ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರು ಜೀವನದಲ್ಲಿ ಆರೋಗ್ಯ ಮತ್ತು ದೇಹದ ಸದೃಢತೆಯನ್ನು ಕಾಪಾಡಿಕೊಳ್ಳುವುದು ಮುಖ್ಯ, ದೈನಂದಿನ ಜೀವನದಲ್ಲಿ ಗುಣಮಟ್ಟದ ಆಹಾರ ಸೇವನೆ ಜೊತೆಗೆ ಕ್ರೀಡೆ, ವ್ಯಾಯಾಮ, ಯೋಗದಲ್ಲಿ ನೋಡಿಕೊಳ್ಳಬೇಕು. ಸರ್ಕಾರಿ ನೌಕರರು ಕೆಲಸ ಕೆಲವು ಸಂದರ್ಭಗಳಲ್ಲಿ ಒತ್ತಡದಿಂದ ಕೂಡಿರಬಹುದು, ಒತ್ತಡದ ಜೀವನ ನಿವಾರಣೆಗೆ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಇದರಿಂದ ಉತ್ತಮ ಪ್ರಜೆ ಆಗಲು, ಕೆಲಸದ ಮೇಲಿನ ಆಸಕ್ತಿ ಹೆಚ್ಚಾಗಲಿದೆ ಎಂದರು.

ಜಿಲ್ಲಾ ಮಟ್ಟದಲ್ಲಿ ವಿಜೇತರಾಗಿ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಜಿಲ್ಲೆಗೆ ಕೀರ್ತಿ ತರಬೇಕು. ಸರ್ಕಾರಿ ನೌಕರರ ಹಿತ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದರು. ದೇವನಹಳ್ಳಿ ಟೌನ್ ಕ್ರೀಡಾಂಗಣ ಅಭಿವೃದ್ಧಿಗೆ 13.5 ಕೋಟಿ ನಿಗದಿ ಮಾಡಲಾಗಿದೆ, ಒಂದು ವರ್ಷದೊಳಗೆ ಆಧುನಿಕ ಕ್ರೀಡಾಂಗಣವಾಗಿ ಅಭಿವೃದ್ಧಿ ಆಗಲಿದೆ. ಇದರಿಂದ ನಗರವಾಸಿಗಳಿಗೆ ಅನುಕೂಲ ವಾಗಲಿದೆ.

ಹಾಗೇಯೇ ವಿಜಯಪುರ ರಸ್ತೆಯಲ್ಲಿ ಇರುವ ತಾಲ್ಲೂಕು ಕ್ರೀಡಾಂಗಣ ಅಭಿವೃದ್ಧಿಗೆ ಚಿಕ್ಕಬಳ್ಳಾಪುರ ಲೋಕಸಭಾ ಸದಸ್ಯರಾದ ಸುಧಾಕರ್ ಅವರು ಕೇಂದ್ರಕ್ಕೆ ಪತ್ರ ಬರೆದಿದ್ದಾರೆ ಅದನ್ನು ಕೂಡ ರಾಷ್ಟ್ರ ಮಟ್ಟದ ಕ್ರೀಡಾಂಗಣವಾಗಿ ಅಭಿವೃದ್ಧಿ ಮಾಡಲಾಗುವುದು ಎಂದರು. ದೊಡ್ಡಬಳ್ಳಾಪುರ ಆದಿ ನಾರಾಯಣ ಹೊಸಹಳ್ಳಿ ಗ್ರಾಮದಲ್ಲಿ ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿಗೆ 25 ಕೋಟಿ ರೂ.ಗಳು ಮಂಜೂರು ಆಗಿದೆ. ಶೀಘ್ರ ಶಿಲಾನ್ಯಾಸ ಮಾಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ರಾಜಣ್ಣ, ಬಯಪ ಅಧ್ಯಕ್ಷರಾದ ಶಾಂತಕುಮಾರ್, ತಹಶೀಲ್ದಾರ್ ಅನಿಲ್, ಇಒ ಶ್ರೀನಾಥ್ ಗೌಡ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಗೀತಾ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಹನುಮಂತರಾಯಪ್ಪ, ಸ್ಥಳೀಯ ಜನಪ್ರತಿನಿಧಿಗಳು, ಸರ್ಕಾರಿ ನೌಕರರು ಉಪಸ್ಥಿತರಿದ್ದರು.

## ಅಪರಿಪೂರ್ಣ ರಸ್ತೆ ಕಾಮಗಾರಿ-ಪತ್ರಕರ್ತರ ಮೇಲೆ ದಮ್ಕಿ



**ಬೆಂಗಳೂರು ಗ್ರಾಮಾಂತರ:** ಮೂರು ತಿಂಗಳಿಂದ ನೆನೆಗುದಿಗೆ ಬಿದ್ದ ಗುಂಡಮಗೆರೆ-ಹೊಸಹಳ್ಳಿ ರಸ್ತೆ ಕಾಮಗಾರಿ: ರಸ್ತೆ ಕಾಮಗಾರಿ ಮುಗಿಸುವಂತೆ ಹೇಳಿದ್ದಕ್ಕೆ ಲೋಕೋಪಯೋಗಿ ಎಇಇಗೆ ಗುತ್ತಿಗೆದಾರ ಕಾರನಾಳ ಅಶ್ವಥನಾರಾಯಣ ದರ್ಪದ ಮಾತು: ಮಾಹಿತಿ ಕೇಳಿದ್ದಕ್ಕೆ ಪತ್ರಕರ್ತರ ಮೇಲೆ ನಾಲಿಗೆ ಹರಿಬಿಟ್ಟ ಗುತ್ತಿಗೆದಾರ

ಇದು ತಾಲ್ಲೂಕಿನ ರೈತರೇ ಓಡಾಡುವ ಪ್ರಮುಖ ರಸ್ತೆ, ನಿತ್ಯ ವಿದ್ಯಾರ್ಥಿಗಳು, ಸಾರ್ವಜನಿಕರು ಸಂಚರಿಸಲು ಇರುವ ಏಕೈಕ ಮಾರ್ಗ. ಸಾಸಲು, ಆರೂಢಿ ಭಾಗದ ಜನತೆಯ ಜೀವನಾಡಿ ಇದ್ದಂತೆ. ಅಂತಹ ರಸ್ತೆಯ ದೊಡ್ಡಹಳ್ಳ ಸಮೀಪದಿಂದ ಗುಂಡಮಗೆರೆ-ಹೊಸಹಳ್ಳಿ ಮಾರ್ಗ ವಾಗಿ ಹಲವು ದಶಕಗಳ ನಂತರ ಡಾಂಬರು ಕೆಲಸ ನಡೆಯುತ್ತಿದೆ. ಆದರೆ ಗುತ್ತಿಗೆದಾರ ಕಾರನಾಳ ಅಶ್ವಥನಾರಾಯಣ ಅವಾಂತರಕ್ಕೆ ರಸ್ತೆ ಕಾಮಗಾರಿ ಆಮೆಗತಿಯಲ್ಲಿ ನಡೆಯುತ್ತಿದೆ. ಕಾಮಗಾರಿ ಬೇಗ ಮುಗಿಸುವಂತೆ ಹೇಳಿದ ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆಯ ಎಇಇ ಪುರುಷೋತ್ತಮ ಅವರಿಗೂ ಡೋಂಟ್ ಕೇರ್ ಎಂಬಂತೆ ದುರಂಹಕಾರದಿಂದ ಉತ್ತರ ನೀಡಿದ್ದಾರೆ.

ರಸ್ತೆಯ ಅಧ್ವಾನದ ಕುರಿತು ವರದಿ ಮಾಡಲು ಪಬ್ಲಿಕ್ ಮಿರ್ಚಿ ಸಂಪದಾಕರು ಗುತ್ತಿಗೆದಾರ ಕಾರನಾಳ ಅಶ್ವಥನಾರಾಯಣಗೆ ದೂರುವಾಣಿ ಕರೆ ಮಾಡಿ 'ಈ ರಸ್ತೆ ಕಾಮಗಾರಿ ಇಷ್ಟು ನಿಧಾನವಾಗಿ ನಡೆಯುತ್ತಿದೆ. ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಅಪಘಾತಗಳು ಆಗುತ್ತಿವೆ ಎಂದು ಸಾರ್ವಜನಿಕರ ಪರ ಕಳಕಳಿ ವ್ಯಕ್ತಪಡಿಸಿದರೆ, ಗುತ್ತಿಗೆದಾರ ನೀನ್ಯಾರು ಕೇಳಲಿಕ್ಕೆ , ನನ್ನತ್ರ ದುಡ್ಡಿಲ್ಲ, ದುಡ್ಡು ಬಂದಾಗ ಮಾಡುತ್ತೇನೆ ಎಂದು ದರ್ಪ ಮೆರೆದಿದ್ದಾನೆ.

ಇನ್ನು ದಿನಾಂಕ 24-10-2025ರಂದು ಕಾಮಗಾರಿ ಪ್ರಾರಂಭ ಮಾಡಲಾಗಿದ್ದು, ಇದೂವರೆಗೂ ಮುಕ್ತಾಯಗೊಳಿಸದೇ ಮೀನಾಮೇಷ ಎಣಿಸಲಾಗುತ್ತಿದೆ...

ಗುತ್ತಿಗೆದಾರ ಕಾಮಗಾರಿ ಪೂರ್ಣಗೊಳಿಸದ ಕಾರಣ ರಸ್ತೆಯಲ್ಲಿ ಓಡಾಡುವ ವಾಹನ ಸವಾರರು ಧೂಳು ಕುಡಿದು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಅಪಘಾತಗಳು ಸಂಭವಿಸುತ್ತಿವೆ. ಮೇಲಾಗಿ ರಸ್ತೆ ಅಕ್ಕಪಕ್ಕದ ಹೊಲಗಳ ಬೆಳೆಗಳಿಗೆ ಸಮಸ್ಯೆ ಎದುರಾಗಿದೆ ಎಂದು ಹೊಸಹಳ್ಳಿ ಗ್ರಾಮಸ್ಥರು ಗುತ್ತಿಗೆದಾರನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನ ಗುಂಡಮಗೆರೆ ರಸ್ತೆಯ ಬಂಡಿಹಳ್ಳ ದಿಂದ ಹೊಸಹಳ್ಳಿ ಸಂಪರ್ಕ ಕಲ್ಪಿಸುವ ರಸ್ತೆ(3.70KM) ಸಂಪೂರ್ಣ ಗುಂಡಿ ಬಿದ್ದು ಹಾಳಾಗಿತ್ತು. ಈ ಭಾಗದ ಜನರ ಅನುಕೂಲಕ್ಕಾಗಿ ಕೆಲವು ತಿಂಗಳ ಹಿಂದೆ ರಸ್ತೆ ದುರಸ್ತಿ ಕಾಮಗಾರಿ ಪ್ರಾರಂಭ ಮಾಡಲಾಗಿತ್ತು. ರಸ್ತೆಗೆ ಜಲ್ಲಿಕಲ್ಲು ಹಾಕಲಾಗಿದೆ ಅಷ್ಟೇ. ಸಂಪೂರ್ಣವಾಗಿ ಕೆಲಸ ಪೂರ್ಣಗೊಳಿಸಲು ಗುತ್ತಿಗೆದಾರ ಹಿಂದೇಟು ಹಾಕುತ್ತಿರುವುದರಿಂದ ಕಾಮಗಾರಿ ನೆನಗುದಿಗೆ ಬಿದ್ದಿದೆ. ಇದರಿಂದಾಗಿ ಈ ರಸ್ತೆಯ ಇಕ್ಕೆಲಗಳಲ್ಲಿರುವ ಹೊಲಗಳು, ಈ ರಸ್ತೆಯಲ್ಲಿ ಪ್ರತಿನಿತ್ಯ ಓಡಾಡುವ ವಾಹನ ಸವಾರರು ನರಕಯಾತನೆ ಅನುಭವಿಸಲಾಗುತ್ತಿದೆ...

ಈ ರಸ್ತೆ ಕಾಮಗಾರಿ ಪ್ರಾರಂಭವಾದಗಿನಿಂದಲೂ ಇದೂವರೆಗೂ ಹೊಸಹಳ್ಳಿ ಪೊಲೀಸ್ ಠಾಣೆಯಲ್ಲಿ ಮೂರು ಪ್ರಕರಣಗಳು ದಾಖಲಾಗಿದೆ. ಪ್ರತಿನಿತ್ಯ ಒಂದಾದರೂ ಅಪಘಾತಗಳು ಸಂಭವಿಸುತ್ತಿವೆ.

ಈ ಕುರಿತು ತಾಲೂಕು ಗುತ್ತಿಗೆದಾರರ ಸಂಘದ ಅಧ್ಯಕ್ಷ ಜಿ.ಲಕ್ಷ್ಮೀಪತಿ ಪ್ರತಿಕ್ರಿಯಿಸಿ, ಗುತ್ತಿಗೆದಾರ ದರ್ಪ ಮೆರೆದಿದ್ದರೆ ನಾವು ಖಂಡಿಸುತ್ತೇವೆ. ಸರ್ಕಾರ ಹಣ ಕೊಟ್ಟಿಲ್ಲ ಅಂತಾ ಹೇಳಬಾರದು, ಕಾಮಗಾರಿ ಪೂರ್ಣಗೊಂಡ ನಂತರ ಸರ್ಕಾರ ಹಣ ಬಿಡುಗಡೆ ಮಾಡೋದು. ಕಾಮಗಾರಿ ವಿಳಂಬಕ್ಕೆ ಸಕಾರಣ ನೀಡಬೇಕೆ ಹೊರೆತು ದುರಾಹಂಕಾರ ಮಾತುಗಳನ್ನಾಡುವುದು ಸರಿಯಲ್ಲ ಎಂದು ಹೇಳಿದರು....

ಇಂತಹ ದುರಾಹಂಕಾರಿ, ಬೆಜವಾಬ್ದಾರಿ, ನಿರ್ಲಕ್ಷ್ಯ ವಹಿಸುತ್ತಿರುವ ಗುತ್ತಿಗೆದಾರ ಕಾರನಾಳ ಅಶ್ವಥನಾರಾಯಣ ವಿರುದ್ಧ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಯಾವ ಕ್ರಮ ತೆಗೆದುಕೊಳ್ಳುತ್ತಾರೆ ಕಾದು ನೋಡಬೇಕಿದೆ.

# ನಾಡಪ್ರಭು ಕೆಂಪೇಗೌಡರ ಬೃಹತ್ ಪ್ರತಿಮೆ ನಿರ್ಮಿಸಿ : ಶ್ರೀ ನಂಜಾವಧೂತ ಸ್ವಾಮೀಜಿ



ಯಶವಂತಪುರ : ಬೆಂಗಳೂರು ನಗರ ಪ್ರವೇಶಿಸುವ ನಾಲ್ಕು ದಿಕ್ಕುಗಳ ಹೆಬ್ಬಾಗಿಲಿನಲ್ಲಿ ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಬೃಹತ್ ಪ್ರತಿಮೆ ನಿರ್ಮಾಣ ಮಾಡಲು ಸರ್ಕಾರ ಹಾಗೂ ಸಂಘ ಸಂಸ್ಥೆಗಳು ಮುಂದಾಗಬೇಕು ಎಂದು ಶ್ರೀ ಸ್ಪಟಿಕಪುರಿ ಮಹಾ ಸಂಸ್ಥಾನ-ಶ್ರೀ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ಮಠದ ಪೀಠಾಧ್ಯಕ್ಷರಾದ ಡಾ.ಶ್ರೀ ನಂಜಾವಧೂತ ಮಹಾ ಸ್ವಾಮೀಜಿ ತಿಳಿಸಿದರು.ಕ್ಷೇತ್ರದ ಉಲ್ಲಾಳು ಸ್ಪಟಿಕಪುರಿ ಮಹಾ ಸಂಸ್ಥಾನ ಶಾಖಾ ಮಠದಲ್ಲಿ ಯಶವಂತಪುರ ಕ್ಷೇತ್ರ ಒಕ್ಕಲಿಗರ ವೇದಿಕೆಯ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದರು.

ದೇಶ, ವಿದೇಶಗಳ ಅಸಂಖ್ಯ ಜನರು ವಿದ್ಯಾಭ್ಯಾಸ, ಉದ್ಯೋಗಕ್ಕಾಗಿ ನಗರದಲ್ಲಿ ನೆಲೆಸಿದ್ದಾರೆ. ವಿಶ್ವವಿಖ್ಯಾತ ಬೆಂಗಳೂರು ನಿರ್ಮಾತೃ ಕೆಂಪೇಗೌಡರ ಭವ್ಯ ಇತಿಹಾಸ ಹೊರಗಿನವರಿಗೆ ಪರಿಚಯಿಸುವ ಗುರುತರ ಜವಾಬ್ದಾರಿ ಸರ್ಕಾರ ಹಾಗೂ ನಗರದಲ್ಲಿ ಜೀವನ ಕಟ್ಟಿಕೊಂಡಿರುವ ಪ್ರತಿಯೊಬ್ಬರ ಮೇಲಿದೆ. ವಿಶೇಷವಾಗಿ ಸಮಾಜ ಬಾಂಧವರು ಪ್ರತಿಮೆ ನಿರ್ಮಾಣ ಕಾರ್ಯಕ್ಕೆ ಕೈಜೋಡಿಸಬೇಕು ಎಂದರು.

ಬೆಂಗಳೂರು ಮೈಸೂರು ದಶಪಥ ಹೆದ್ದಾರಿಯ ಹೆಬ್ಬಾಗಿಲಾಗಿರುವ ಕೆಂಗೇರಿ ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಸಮೀಪದಸ್ಥಳ ಸೂಕ್ತವಾಗಿದ್ದು ಇಲ್ಲಿ ಕೆಂಪೇಗೌಡರ ಪ್ರತಿಮೆ ನಿರ್ಮಾಣಕ್ಕೆ ವೇದಿಕೆ ಸದಸ್ಯರು ಕಾರ್ಯಯೋನ್ಮುಖರಾಗಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಯಶವಂತಪುರ ಕ್ಷೇತ್ರ ಒಕ್ಕಲಿಗರ ವೇದಿಕೆಯ ಅಧ್ಯಕ್ಷ ರಾಮಕೃಷ್ಣ, ಪ್ರಧಾನ ಕಾರ್ಯದರ್ಶಿ ಯೋಗಾನಂದ, ಕಾರ್ಯಾಧ್ಯಕ್ಷ ಆರ್. ಮುನಿರಾಜು, ಸಂಘಟನಾ ಕಾರ್ಯದರ್ಶಿಗಳಾದ ಲತಾ, ಸಾವಿತ್ರಿ, ಶಾಂತ, ತಾರಾ, ಪದ್ಮಾ ಹರೀಶ್, ನಿರ್ದೇಶಕ ನರಸಿಂಹಮೂರ್ತಿ ಸೇರಿದಂತೆ ವೇದಿಕೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.